# ಜನಶ್ರೀ ಟೈಮ್ಸ್

ಕನ್ನಡ ದಿನಪತ್ರಿಕೆ

JANASHREE TIMES KANNADA DAILY NEWS PAPER

PRGI NO : KNKAN/26/A0482

ಸಂಪಾದಕರು: ಆನಂದಯ್ಯ ವಿರಕ್ತಮಠ | ಸಂಪುಟ: 01 ಸಂಚಿಕೆ: 44 ಪುಟಗಳು: 04 ಬೆಲೆ: 02 ರೂ. ದಿನಾಂಕ: 13-08-2026 ಗುರುವಾರ | 73536 56555


ಜನಶ್ರೀವಾಣಿ

ಜನರಿಂದ ಮತ ಪಡೆದು ಹಿತ ಕಾಯಲಿಲ್ಲ, ಖುರ್ಚಿಗಾಗಿ ಮತದ ಮೌಲ್ಯವನ್ನೇ ಕಳೆವುದೆಂತು ಸರಿ..?

■ ಆನಂದಯ್ಯ ವಿರಕ್ತಮಠ
ಸಂಪಾದಕರು: ಜನಶ್ರೀ ಟೈಮ್ಸ್

# ಇಂದಿನಿಂದ ವಿಧಾನಮಂಡಲ ಅಧಿವೇಶನ : ಆಡಳಿತ–ಪ್ರತಿಪಕ್ಷಗಳ ವಾಕ್ಸಮರಕ್ಕೆ ವೇದಿಕೆ ಸಿದ್ಧ



ಬೆಂಗಳೂರು: ನಾಳೆಯಿಂದ ವಿಧಾನ ಮಂಡಲದ ಉಭಯ ಸದನಗಳ ಮಳೆಗಾಲದ ಅಧಿವೇಶನ ಆರಂಭವಾಗಲಿದ್ದು, ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ವಾಕ್ಸಮರ ಏರ್ಪಡುವ ಸಾಧ್ಯತೆಗಳಿವೆ.ರಾಜ್ಯದಲ್ಲಿನ ಭೀಕರ ಬರ ಪರಿಸ್ಥಿತಿ, ಕೆಲವೆಡೆ ಉಂಟಾಗಿರುವ ಅತಿವೃಷ್ಟಿ, ಬಿಡದಿ ಉಪನಗರ ಯೋಜನೆ ವಿರೋಧಿಸಿ ರೈತರು ನಡೆಸುತ್ತಿರುವ ಹೋರಾಟ, ತಮಿಳುನಾಡಿಗೆ ಕಾವೇರಿ ನದಿ ನೀರು ಹಂಚಿಕೆ ವಿಚಾರ, ಬಿಎಂಐಸಿ ಯೋಜನೆ, ನೈಸ್ ಸಂಸ್ಥೆಯಿಂದ ನಿಯಮ ಬಾಹಿರವಾಗಿ ಟೋಲ್ ಸಂಗ್ರಹಿಸುತ್ತಿರುವ ಆರೋಪ, ಸಂಪುಟ ವಿಸ್ತರಣೆಯ ಅಸಮಾಧಾನ, ಖಾತೆ ಹಂಚಿಕೆ ವಿಳಂಬ ಮೊದಲಾದ ವಿಚಾರಗಳು ಅಧಿವೇಶನದಲ್ಲಿ ಪ್ರಮುಖವಾಗಿ ಪ್ರಸ್ತಾಪಗೊಂಡು ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಆರೋಪ– ಪ್ರತ್ಯಾರೋಪ ತಾರಕಕ್ಕೇರುವ ಸಾಧ್ಯತೆಗಳಿವೆ.

ರಾಜ್ಯ ಸರ್ಕಾರ ಹಾಗೂ ಆಡಳಿತಾರೂಢ ಕಾಂಗ್ರೆಸ್ ಪಕ್ಷವನ್ನು ಇಕ್ಕಟ್ಟಿಗೆ ಸಿಲುಕಿಸಲು ವಿರೋಧ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಸಜ್ಜಾಗಿವೆ. ಅದೇ ರೀತಿ ಸರ್ಕಾರದ ಸಮರ್ಥನೆಗೆ ಕಾಂಗ್ರೆಸ್ ಪಕ್ಷವೂ ಕೂಡ ಸಿದ್ಧತೆ ನಡೆಸಿದೆ. ವಾಲೀಕಿ ಅಭಿವೃದ್ಧಿ ನಿಗಮದ ಹಣದ ಅವ್ಯವಹಾರದ ಆರೋಪ ಎದುರಿಸುತ್ತಿರುವ ನಾಗೇಂದ್ರ ಅವರನ್ನು ಸಂಪುಟಕ್ಕೆ ಸೇರ್ಪಡೆ ಮಾಡಿಕೊಂಡಿರುವುದಕ್ಕೆ ಪ್ರತಿಪಕ್ಷ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಸಂಪುಟದಿಂದ ಕೈಬಿಡುವಂತೆ ಆಗ್ರಹಿಸುತ್ತಿದೆ. ಈ ವಿಚಾರವನ್ನು ಸದನದಲ್ಲಿ ಪ್ರಮುಖವಾಗಿ ಪ್ರಸ್ತಾಪಿಸುವುದಾಗಿ ಪ್ರಕಟಿಸಿದೆ. ನಾಳೆಯಿಂದ ಆ.27ರವರೆಗೆ 10 ದಿನಗಳ ಕಾಲ ಅಧಿವೇಶನ ನಡೆಯಲಿದ್ದು, ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಸಚಿವಾಲಯಗಳು ಸಕಲ ಸಿದ್ಧತೆ ಮಾಡಿಕೊಂಡಿವೆ. ಇಂದು ಸಹ ವಿಧಾನಸೌಧದ ಸಿದ್ಧತಾ ಕಾರ್ಯ ಭರದಿಂದ ಸಾಗಿತ್ತು. ನಿರೀಕ್ಷೆಯಂತೆ ಮೊದಲ ದಿನವಾದ ನಾಳೆ ಆರಂಭದಲ್ಲಿ ಅಗಲಿದ ಗಣ್ಯರಿಗೆ ಶ್ರದ್ಧಾಂಜಲಿ ಸಲ್ಲಿಸಲಾಗುತ್ತದೆ. ಅನಂತರ ಸರ್ಕಾರದ ಅಧಿಕೃತ ಕಾರ್ಯಕಲಾಪಗಳು ನಡೆಯಲಿವೆ. ಬರಪೀಡಿತ ಪ್ರದೇಶಗಳನ್ನು ಘೋಷಣೆ ಮಾಡಿ ಬರಪ–ರಿಹಾರ ನೀಡುತ್ತಿಲ್ಲ. ರೈತರು ಬೆಳೆ ಕಳೆದುಕೊಂಡು ಕಂಗಾಲಾಗಿದ್ದಾರೆ. ಕುಡಿಯುವ ನೀರಿಗೂ ಸಮಸ್ಯೆ ಎದುರಾಗುವ ಸಾಧ್ಯತೆಗಳಿದ್ದು, ಈ ವಿಚಾರದಲ್ಲಿ ಪಕ್ಷ ಭೇದ ಮರೆತು ಚರ್ಚೆ ನಡೆಸುವ ಸಾಧ್ಯತೆಗಳಿವೆ. ಬಿಡದಿ ಉಪನಗರ ಯೋಜನೆ ವಿಚಾರದಲ್ಲಿ ರೈತರಿಗೆ ಬೆಂಬಲ ವ್ಯಕ್ತಪಡಿಸಿ ಪ್ರತಿಭಟಿಸುತ್ತಿರುವ ವಿರೋಧ ಪಕ್ಷಗಳು ಪ್ರಮುಖವಾಗಿ ಈ ವಿಷಯ ಪ್ರಸ್ತಾಪಿಸಲಿವೆ. ಈ ವಿಚಾರದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ವಾಗ್ವಾದ ಕಾವೇರಿದ ದನಿಯಲ್ಲಿ ನಡೆಯುವ ಸಾಧ್ಯತೆಗಳು ಹೆಚ್ಚಾಗಿವೆ.

ಸಂಕಷ್ಟ ಪರಿಸ್ಥಿತಿಯಲ್ಲೂ ತಮಿಳುನಾಡಿಗೆ ಕಾವೇರಿ ನದಿಯಿಂದ ನೀರು ಬಿಡಲು ಆದೇಶ ನೀಡಿರುವ ವಿಚಾರವೂ ಪ್ರತಿಧ್ವನಿಸಲಿದ್ದು, ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಆಗ್ರಹ ಕೇಳಿಬರಲಿದೆ. ಅಲ್ಲದೆ, ಸಂಪುಟ ವಿಸ್ತರಣೆ ಬೆನ್ನಲ್ಲೆ ಕಾಂಗ್ರೆಸ್‌ನಲ್ಲಿ ಉಂಟಾಗಿರುವ ಅಸಮಾಧಾನ, ಖಾತೆ ಹಂಚಿಕೆ ವಿಳಂಬದ ವಿಚಾರವೂ ಸಂದರ್ಭೋಚಿತವಾಗಿ ಪ್ರಸ್ತಾಪವಾಗುವ ಸಾಧ್ಯತೆಗಳು ಹೆಚ್ಚಾಗಿವೆ. ಗ್ಯಾರಂಟಿ ಸವಲತ್ತುಗಳು ಫಲಾನುಭವಿಗಳಿಗೆ ಸಕಾಲದಲ್ಲಿ ತಲುಪದಿರುವುದು, ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ನೀಡದ ಆರೋಪ, ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಸೇರಿಂತೆ ನಾಡು ಎದು–ರಿಸುತ್ತಿರುವ ಹತ್ತು ಹಲವು ಜ್ವಲಂತ ಸಮಸ್ಯೆಗಳ ಮೇಲೆ ಶಾಸಕರು ಬೆಳಕು ಚೆಲ್ಲಿ ಸರ್ಕಾರದಿಂದ ಸೂಕ್ತ ಉತ್ತರ ಪಡೆಯುವ ಸಾಧ್ಯತೆಗಳಿವೆ. ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾದ ಬಳಿಕ ಮೊದಲ ಅಧಿವೇಶನ ಇದಾಗಿದೆ. ಸಿದ್ದರಾಮಯ್ಯ ಅವರು ಎರಡನೇ ಬಾರಿಗೆ ಮಾಜಿ ಮುಖ್ಯಮಂತ್ರಿಯಾದ ಬಳಿಕ ನಡೆಯುತ್ತಿರುವ ಮೊದಲ ಅಧಿವೇಶನವಾಗಿದೆ. ಹಾಗೆಯೇ ಶಾಸಕರಾಗಿದ್ದ ಕೆಲವರು ಸಚಿವರಾಗಿದ್ದಾರೆ. ಸಚಿವರಾಗಿದ್ದ ಕೆಲವರು ಮಾಜಿ ಸಚಿವರಾಗಿದ್ದಾರೆ. ಹೀಗಾಗಿ ಅವರ ಸ್ಥಾನಗಳು ಬದಲಾಗಿರುವುದರಿಂದ ಅಧಿವೇಶನ ತೀವ್ರ ಕುತೂಹಲ ಮೂಡಿಸಿದೆ.

## ಜಿಹೆಚ್‌ಎನ್ ಕಾಲೇಜಿನಲ್ಲಿ ಅರ್ಥಪೂರ್ಣ ಗ್ರಂಥಪಾಲಕರ ದಿನಾಚರಣೆ



ಜನಶ್ರೀ ಟೈಮ್ಸ್ ಸುದ್ದಿ

ಕೊಪ್ಪಳ: ಗಂಗಾವತಿ ನಗರದ ಗುಂಜಹಳ್ಳಿ ಹಿರೇನಾಗಪ್ಪ ವಾಣಿಜ್ಯ ಮಹಾವಿದ್ಯಾಲಯದ ಗ್ರಂಥಾಲಯದಲ್ಲಿ ರಾಷ್ಟ್ರೀಯ ಗ್ರಂಥಪಾಲಕರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಭಾರತೀಯ ಗ್ರಂಥಾಲಯ ವಿಜ್ಞಾನದ ಪಿತಾಮಹ ಪದ್ಮಶ್ರೀ ಡಾ. ಎಸ್. ಆರ್. ರಂಗನಾಥನ್ ಅವರ 134ನೇ ಜನ್ಮದಿನದ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಗ್ರಂಥಪಾಲಕ ಡಾ. ರಾಜಶೇಖರ ಮಹಾದೇವಗೌಡ ಪಾಟೀಲ ಅವರು ಮಾತನಾಡಿ, ರಂಗನಾಥನ್ ರವರ ಗ್ರಂಥಾಲಯ ವಿಜ್ಞಾನದ ಪಂಚಸೂತ್ರಗಳು, ಕೊಲನ್ ವರ್ಗೀಕರಣ ಪದ್ಧತಿ, ಸಾರ್ವಜನಿಕ ಗ್ರಂಥಾಲಯ ಚಳವಳಿ ಹಾಗೂ ಗ್ರಂಥಾಲಯ ಶಾಸನದ ಅಭಿವೃದ್ಧಿಗೆ ನೀಡಿದ ಮಹತ್ವದ ಕೊಡುಗೆಗಳನ್ನು ಸ್ಮರಿಸಿದರು. "ಗ್ರಂಥಾಲಯವು ಕೇವಲ ಪುಸ್ತಕಗಳನ್ನು ಸಂಗ್ರಹಿಸುವ ಸ್ಥಳವಲ್ಲ; ಅದು ಜ್ಞಾನ, ಶಿಕ್ಷಣ ಮತ್ತು ಚಿಂತನೆಯ ಕೇಂದ್ರವಾಗಬೇಕು. ಡಿಜಿಟಲ್ ಯುಗದಲ್ಲಿ ಇ–ಪುಸ್ತಕ, ಇ–ಜರ್ನಲ್ ಹಾಗೂ ಕೃತಕ ಬುದ್ಧಿಮತ್ತೆಯಂತಹ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು, ವಿದ್ಯಾರ್ಥಿಗಳಲ್ಲಿ ಓದುವ ಸಂಸ್ಕೃತಿಯನ್ನು ಬೆಳೆಸುವುದು ಇಂದಿನ ಗ್ರಂಥಾಲಯಗಳ ಪ್ರಮುಖ ಜವಾಬ್ದಾರಿಯಾಗಿದೆ" ಎಂದು ಹೇಳಿದರು. ಕಾಲೇಜಿನ ಪ್ರಾಂಶುಪಾಲರಾದ ಶರಣಬಸವಯ್ಯ ಅವರು ಮಾತನಾಡಿ, ವಿದ್ಯಾರ್ಥಿಗಳು ಕಾಲೇಜಿನ ಗ್ರಂಥ–ಾಲಯವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. "ಜೀವನದಲ್ಲಿ ಉತ್ತಮ ಸ್ನೇಹಿತರನ್ನು ಹೊಂದುವುದು ಎಷ್ಟು ಮುಖ್ಯವೋ, ಉತ್ತಮ ಪುಸ್ತಕ ಮತ್ತು ಗ್ರಂಥಾಲಯವನ್ನು ಸ್ನೇಹಿತರನ್ನಾಗಿ ಮಾಡಿಕೊಂಡು ಜ್ಞಾನ ಸಂಪಾದಿಸುವುದೂ ಅಷ್ಟೇ ಮುಖ್ಯ" ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಹಿರಿಯ ಅಧ್ಯಾಪಕರಾದ ಸೋಮನಗೌಡ ಮಾತನಾಡಿ, ವಿದ್ಯಾರ್ಥಿಗಳು ಗ್ರಂಥಾಲಯದ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಹೆಚ್ಚಿನ ಜ್ಞಾನ ಗಳಿಸಬೇಕು. ಗ್ರಂಥಾಲಯದಲ್ಲಿ ಬೆಳೆಸಿಕೊಳ್ಳುವ ಓದುವ ಹವ್ಯಾಸವು ಭವಿಷ್ಯದಲ್ಲಿ ಉತ್ತಮ ಜೀವನ ರೂಪಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು. ಗ್ರಂಥಾಲಯವನ್ನು ಕೇವಲ ಪರೀಕ್ಷಾ ಸಮಯದಲ್ಲಿ ಬಳಸುವ ಸ್ಥಳವನ್ನಾಗಿಸದೆ, ಜೀವನಪೂರ್ತಿ ಜ್ಞಾನ ನೀಡುವ ಉತ್ತಮ ಸ್ನೇಹಿತನನ್ನಾಗಿ ಮಾಡಿಕೊಳ್ಳೋಣ" ಎಂಬ ಸಂದೇಶದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು. ಅಧ್ಯಾಪಕರಾದ ಜಯಲಕ್ಷ್ಮಿ ಅವರು ಕಾರ್ಯಕ್ರಮವನ್ನು ನಿರೂಪಿಸಿದರು. ಡಾ. ವೆಂಕಟೇಶ್ ಅವರು ವಂದನಾರ್ಪಣೆ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಉದ್ಯಮಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಳ್ಳಿ : ಜಿ.ಯು.ಹುಡೇದ್

ಜನಶ್ರೀ ಟೈಮ್ಸ್ ಸುದ್ದಿ

ರಾಯಚೂರು: ವಿದ್ಯಾರ್ಥಿನಿಯರು ಸಕ್ರಿಯವಾಗಿ ಪಾಲ್ಗೊಳ್ಳುವುದರ ಜೊತೆಗೆ ಯಾವುದೇ ಪ್ರಮಾಣದ ಉದ್ಯಮಗಳಾಗಲಿ ಅವುಗಳನ್ನು ಪ್ರಾರಂಭಿಸುವ ಮೊದಲು ಉದ್ಯಮಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಳ್ಳುವದು ಬಹಳ ಅವಶ್ಯಕ ಎಂದು ಸಿಡಾಕ್ ಸಲಹೆಗಾರರಾದ ಜಿ.ಯು.ಹುಡೇದ ಅವರು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.




ಇತ್ತೀಚೆಗೆ ರಾಯಚೂರಿನ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಬೆಂಗಳೂರು ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಅಂತಿಮ ವರ್ಷದ ಪದವಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ 3 ದಿನಗಳ ಉದ್ಯಮಶೀಲತಾ ತಿಳುವಳಿಕೆ ಕಾರ್ಯಕ್ರಮದ ಸಮಾರೋಪ ಸಮಾರಂಭವನ್ನು ಉದ್ದೇಶಿಸಿ ಮಾತನಾಡುತ್ತಾ, ಉದ್ಯಮಗಳನ್ನು ಪ್ರಾರಂಭಿಸುವವ–ರಿಗೆ ಸರ್ಕಾರದಿಂದ ಹಲವು ಯೋಜನೆಗಳನ್ನು ಜಾರಿಗೆ ತರಲಾಗಿದೆ, ಎಂದು ತಿಳಿಸಿ ಆರ್ಥಿಕ ಅಭಿವೃದ್ಧಿಗೆ ಉದ್ಯಮಗಳ ಪಾತ್ರ ಮಹತ್ವತ್ತಾಗಿದೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲರಾದ ಡಾ. ಸುಗುಣ ಬಸವರಾಜ, ಇವರು ಬಿ ಎ, ಬಿಕಮ್, ಬಿ ಎಸ್ ಸಿ ಅಂತಿಮ ವರ್ಷದ ವಿದ್ಯಾರ್ಥಿನಿಯರಿಗೆ ತರಬೇತಿ ನೀಡಿದ ಕಾರ್ಯ ಶ್ಲಾಘಿ–ಸುತ್ತಾ, ಮುಂದೆ ಬರುವ ದಿನಗಳಲ್ಲಿ ಸರಿಯಾದ ಗುರಿಯನ್ನು ಇಟ್ಟುಕೊಂಡು ಸಮಾಜವನ್ನು & ದೇಶವನ್ನು ಬಲಪಡಿಸುವ ನಿಟ್ಟಿನಲ್ಲಿ ಧನಾತ್ಮಕ ಆಲೋಚನೆಗಳನ್ನು ಬೆಳೆಸಿಕೊಳ್ಳಬೇಕು ಎಂದು ನುಡಿದರು. ವಿದ್ಯಾರ್ಥಿನಿಯರಿಗೆ ಸಿಡಾಕ್ ಸಂಸ್ಥೆಯಿಂದ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು. ಸಿಡಾಕ್ ಮುಖಾಂತರ ತರಬೇತಿ ಪಡೆದು ಉದ್ಯಮಗಳನ್ನು ಯಶಸ್ವಿಯಾಗಿ ನಡೆಸಿಕೊಂಡು ಹೋಗುತ್ತಿರುವ ಶ್ರೀಮತಿ ನಾಗರತ್ನ, ಅವರು ತಮ್ಮ ಅನುಭವ ಹಂಚಿಕೊಂಡರು, ಶಿಬಿರಾರ್ಥಿಗಳಾದ ಕುಮಾರಿ ಅಶ್ವಿನಿ, ಕುಮಾರಿ ಸಾನಿಯಾ ಇವರುಗಳು ತರಬೇತಿ ಬಗ್ಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಉದ್ಯಮವನ್ನು ಆಯ್ಕೆ ಮಾಡುವ ವಿಧಾನ, ವ್ಯಾಪಾರೋದ್ಯಮಗಳ ಅವಕಾಶಗಳು.

## ಯುವಕರು ಸದೃಢ ಆರೋಗ್ಯ, ಸನ್ನಡತೆ ಬೆಳೆಸಿಕೊಳ್ಳಿ : ಡಾ. ಅರುಂಧತಿ ಕೆ.

ಜನಶ್ರೀ ಟೈಮ್ಸ್ ಸುದ್ದಿ

ಗದಗ: ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ ಜಿಲ್ಲೆಯ ರೆಡ್ ರಿಬ್ಬನ್ ಕಾಲೇಜುಗಳು ಮತ್ತು ಜಿಲ್ಲೆಯ ಎಲ್ಲ ಶಿಕ್ಷಣ ಮಹಾವಿದ್ಯಾಲಯಗಳು ಸರಕಾರಿ ಪ್ರಥಮ ದರ್ಜೆ ಮಾಹಾವಿದಾಲಯ ನರಸಾಪೂರ–ಗದಗ ಇವರುಗಳ ಸಹಯೋಗದಲ್ಲಿ ಜಿಲ್ಲಾ ಮಟ್ಟದ ಅಂತರಾಷ್ಟ್ರೀಯ ಯುವ ದಿನ ಹಾಗೂ ತೀವ್ರತರ ಹೆಚ್.ಐ.ವಿ. ಅರಿವಿನ ಮಾಸಾಚರಣೆ ಉದ್ಘಾಟನಾ ಕಾರ್ಯಕ್ರಮ ಜರುಗಿತು.



ಪ್ರಾರಂಭದಲ್ಲಿ ಕುಮಾರಿ ಆಶಾ ಶಿಂಧೆ ಪ್ರಾರ್ಥಿಸಿದರು. ಪ್ರೋ. ಮಹಾದೇವ ವಡೇಕಾರ ಇವರು ವೇದಿಕೆ ಮೇಲೆ ಆಸಿನರಾದ ಎಲ್ಲ ಗಣ್ಯಮಾನ್ಯರನ್ನು ಸ್ವಾಗತಿಸಿದರು. ಸಮಾರಂಭ ಉದ್ಘಾಟಿಸಿದ ಡ್ಯಾಪ್ಕ್ಯು ಅಧಿಕಾರಿಗಳಾದ ಡಾ॥ ಅರುಂಧತಿ ಕೆ. ಅವರು ಮಾತನಾಡಿ ಯೌವನವನ್ನು ಸದುಪಯೋಗಪಡಿಸಿಕೊಳ್ಳಲು ಮಾನಸಿಕ ದೈಹಿಕ ಸಾಮಾಜಿಕ ಆರೋಗ್ಯದ ಹಿತಕ್ಕಾಗಿ ಸಮಾಜದಲ್ಲಿ ಒಳ್ಳೆಯ ಸಂಪನ್ಮೂಲ ವ್ಯಕ್ತಿಗಳಾಗಿ ಬೆಳೆಯಬೇಕು ಹಾಗೂ ಹೆಚ್.ಐ.ವಿ. ಏಡ್ಸ್ ಅರಿವಿನ ಮಾಸಾಚರಣೆಯಲ್ಲಿ ರೋಗದ ಬಗ್ಗೆ ಮಾಹಿತಿ ತಿಳಿಯಲು ಕರೆ ನೀಡಿದರು. "ಸುಸ್ಥಿರ ಅಭಿವೃದ್ಧಿಗಾಗಿ ಸ್ಥಳೀಯ ಯುವ ಜನರ ಪಾತ್ರ ಹಾಗೂ ಗುರಿಗಳು" ಈ ವರ್ಷದ ಘೋಷಣೆಯಂತೆ ಎನ್ನುವಂತೆ ಇಂದಿನ ಯುವಕರು ಸಧೃಡ ಆರೋಗ್ಯವನ್ನು ಹೊಂದಿ, ದೇಶದ ಭವಿಷ್ಯ ರೂಪಿಸುವಲ್ಲಿ ಕೈಜೋಡಿಸಬೇಕೆಂದು ತಿಳಿ ಹೇಳಿದರು. ಇಂದಿನ ಯುವ ಜನಾಂಗದಲ್ಲಿ ಸಾಮಾಜಿಕ ಮೌಲ್ಯಗಳು ಕಡಿಮೆಯಾಗಿದ್ದು, ಗುರು ಹಿರಿಯರು, ತಂದೆ ತಾಯಿ ಎನ್ನುವ ಗೌರವವಿಲ್ಲದೆ ಆಧುನಿಕ ಮಾಧ್ಯಮದ ತಂತ್ರಜ್ಞಾನಕ್ಕೆ ಮಾರು ಹೋಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ.

ನಮ್ಮ ದೇಶದಲ್ಲಿ 40% ಇರುವ ಯುವಜನರು ತಮ್ಮ ಜವಾಬ್ದಾ–ರಿಯನ್ನು ಅರಿತು ದೇಶದ ಒಳಿತಿಗೆ ಪೂರಕವಾದ ತೀರ್ಮಾಣವನ್ನು ಕೈಗೊಂಡು ಸದ್ರುಡವಾದ ದೇಶ ಕಟ್ಟುವಲ್ಲಿ ಕೈ ಜೋಡಿಸಬೇಕೆಂದು ತಿಳಿಸಿದರು. ಹಾಗೂ ರಕ್ತದಾನ ಮಾಡಲು ಯುವ ಸಮುದಾಯ ಮುಂದಾಗಬೇಕು, ರಕ್ತದಾನ ಮಾಡಲು ಹೆಚ್.ಬಿ. ಪ್ರಮಾಣ 12.5 ಗ್ರಾಂ ಇರಬೇಕು, ತೂಕ 45 ಕೆ.ಜಿ. ಗಿಂತ ಹೆಚ್ಚಿಗೆ ಇರಬೇಕು, 18 ರಿಂದ 60 ವಯೋಮಾನದ ಪುರುಷ ಮಹಿಳೆ ಎಂಬ ಬೇಧ ವಿಲ್ಲದೆ ಯಾರು ಬೇಕಾದರೂ ರಕ್ತದಾನ ಮಾಡಬಹುದು ಎಂದು ತಿಳಿಸಿದರು. ಹಾಗೂ ವಿದ್ಯಾರ್ಥಿಗಳಿಕೆ ಸದೃಢ ಆರೋಗ್ಯ ಮತ್ತು ಸನ್ನಡತೆಗೆ ಪ್ರಮಾಣ ವಚನ ಬೋಧಿಸಿದರು. ಇನ್ನೋರ್ವ ಅತಿತಿಗಳಾದ ಶ್ರೀ ಬಿ.ಬಿ. ಲಾಳಗಟ್ಟಿ ಜಿಲ್ಲಾ ಐಸಿಟಿಸಿ ಮೇಲ್ವಿಚಾರಕರು ಪ್ರಾಸ್ತಾವಿಕವಾಗಿ ಮಾತನಾಡಿ ಅಂತರಾಷ್ಟ್ರೀಯ ಯುವ ದಿನಾಚರಣೆಯ ಮಹತ್ವವನ್ನು ತಿಳಿಸುತ್ತಾ ಇಂದಿನ ಯುಗದಲ್ಲಿ ಯುವಕರು ಆರೋಗ್ಯ ಅರಿವವನ್ನು ಮೂಡಿಸಿ, ಶಿಕ್ಷಣವನ್ನು ಪರಿವರ್ತಿಸುವುದು. ಸುಸ್ಥಿರ ಅಭಿವೃದ್ಧಿಯನ್ನು ಸಾಧಿಸಲು ಶಿಕ್ಷಣವನ್ನು ಹೆಚ್ಚು ಪ್ರಸ್ಥುತ ನ್ಯಾಯ ಸಮ್ಮತವಾಗಿಸುವ ನಿಟ್ಟಿನಲ್ಲಿ ಯುವಜನರ ಪಾತ್ರ ಮುಖ್ಯವಾಗಿರುವುದೆಂದು ತಿಳಿಸಿದರು.

ಮುಂದುವರೆದು ಮಾತನಾಡಿ ಜಾತಿ, ಧರ್ಮ, ಲಿಂಗ ಗುಂಪು ಆಧಾರಿತ ಸವಾಲುಗಳನ್ನು ಎದುರುಸಿ ಯುವಕರು ಸನ್ನಡತೆಯನ್ನು ಅಳವಡಿಸಿಕೊಳ್ಳಬೆಂದು ತಿಳಿಸಿದರು. ವಿಶ್ವದ ಇತಿಹಾಸದಲ್ಲಿ ಸ್ವಾಮಿ ವಿವೇಕಾನಂದರು ಹೇಳುವಂತೆ ಪ್ರಯತ್ನವೆಂಬ ಚಂದ್ರನ್ನನ್ನು ಬೆಳಗಿಸಿದತೆ ಯಶಸ್ಸೆಂಬ ಬೆಳದಿಂಗಳು ಸಿಗುತ್ತದೆ ಹಾಗೇಯೇ ಶ್ರದ್ಧೆ, ಸಹನೆ, ಸತತ ಪ್ರಯತ್ನ ಜಯ ಸಾಧಿಸಲು ಅಗತ್ಯವಾಗಿ ಬೇಕಾದ ಮೂರು ಸಾಧನಗಳು ಇದರ ಜೊತೆಗೆ ಆತ್ಮವಿಶ್ವಾಸವಿದ್ದರೆ ಮಾತ್ರೆ ವಿಜಯಲಕ್ಷ್ಮೀ ಒಲಿಯುತ್ತಾಳೆಂದು ತಿಳಿಸಿದರು. ರಕ್ತದಾನ ಮಾಡಲು ಹಾಗೂ ರೋಗಿಯ ಜೀವ ಉಳಿಸಲು ವೈದ್ಯರಾಗಬೇಕಿಲ್ಲ, ರಕ್ತದಾನ ಮಾಡಿದರೆ ಸಾಕು ಎಂದು ತಿಳಿಸಿದರು. ನಂತರ ಕಾಲೇಜಿನ ಪ್ರಾಚಾರ್ಯರಾದ ಡಾ. ಶಿವಪ್ಪ ಕುರಿ ರವರು ಅಧ್ಯಕ್ಷೀಯ ನುಡಿಗಳಲ್ಲಿ ಮಾತನಾಡಿ ಇಂದಿನ ಯುವಕರು ದುಶ್ಚಟಗಳಿಂದ ದೂರವಿದ್ದು, ಯವ್ವನವನ್ನು ಜೋಪಾನ ಮಾಡಿಕೊಳ್ಳಬೇಕು ಹಾಗೂ ಶ್ರೀಮಂತ ದುರಾಚಾರಿಗಳಿಂದ ದೂರವಿದ್ದ ಸಮಾಜಕ್ಕೆ ಒಳ್ಳೇಯ ಕೊಡುಗೆ ಕೋಡಲು ತಿಳಿಸಿದರು. ಇಲಾಖೆಯ ವಿವಿಧ ಸಾಮಾಜಿಕ ಕಾರ್ಯಗಳಲ್ಲಿ ಪಾಲ್ಗೊಂಡು ಸಾಮಾಜಿಕ ಸೇವೆಗೆ ಮುಂದಾಗಬೇಕೆಂದು ಹೇಳಿದರು. ಸಮಾರಂಭದಲ್ಲಿ ಪ್ರೋ. ಖಲೀಲ ಅಹ್ಮದ್, ಶ್ರೀ ಸಣ್ಣಕ್ಕಿ, ಪ್ರೋ. ಕ್ಯಾರಕೋಪ್ಪ, ಶ್ರೀಮತಿ ಚೆನ್ನಮ್ಮ ಆಪ್ತಸಮಾಲೋಚಕರು, ಶ್ರೀ ಮಹೇಶ ಎಸ್.ಎಸ್.ಕೆ. ಸಂಯೋಜಕರು ಹಾಗೂ ಆರೋಗ್ಯ ಸಿಬ್ಬಂದಿ ವರ್ಗ ಹಾಜರಿದ್ದರು. ಪ್ರೋ. ಮಹಾದೇವ ವಡೇಕಾರ ಕಾರ್ಯಕ್ರಮವನ್ನು ನಿರೂಪಿಸಿದರು, ಪ್ರೋ. ಕವಿತಾ ಜಂಬಗಿ ವಂದಿಸಿದರು.

## ಸೆಪ್ಟೆಂಬರ್ ಅಂತ್ಯದೊಳಗೆ ಇಕೆವೈಸಿ ಪೂರ್ಣಗೊಳಿಸಿ : ಡಿಸಿ

ಜನಶ್ರೀ ಟೈಮ್ಸ್ ಸುದ್ದಿ

ವಿಜಯನಗರ: ಪಡಿತರ ವ್ಯವಧ್ಥೆಯಲ್ಲಿ ಪಾರದರ್ಶಕತೆ ತರುವ ಉದ್ದೇಶದಿಂದ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಉ ಐದು ವರ್ಷ ಇ–ಕೆವೈಸಿ ಪೂರೈಸಿದ ಪಡಿತರ ಫಲಾನುಭವಿಗಳಿಗೆ ಮತ್ತೊಮ್ಮೆ ತಮ್ಮ ಇ–ಕೆವೈಸಿ ಕಡ್ಡಾಯಗೊಳಿಸಿದೆ.



ಈ ಕುರಿತು ಜಿಲ್ಲೆಯಾದ್ಯಂತ ಅನೇಕ ಬಾರಿ ವ್ಯಾಪಕ ಪ್ರಚಾರ ನೀಡಲಾಗಿದೆ. ಆದರೂ ಈವರೆಗೆ ಇ–ಕೆವೈಸಿ ಮಾಡಿಸದೇ 6,95,979 ಫಲಾನುಭವಿಗಳ ಇ–ಕೆವೈಸಿ ಬಾಕಿ ಉಳಿದಿದೆ. ಈ ನಿಟ್ಟಿನಲ್ಲಿ ಇ–ಕೆವೈಸಿ ಕಾರ್ಯ ಪ್ರಗತಿಯಲ್ಲಿದ್ದು, ಜಿಲ್ಲೆಯ ಹರಪನಹಳ್ಳಿ ತಾಲ್ಲೂಕಿನಲ್ಲಿ 1,71,427, ಹಗರಿಬೊಮ್ಮನಹಳ್ಳಿ ತಾಲ್ಲೂಕಿನಲ್ಲಿ 99,744, ಹೊಸಪೇಟೆಯಲ್ಲಿ 1,51,170, ಹಡಗಲಿಯಲ್ಲಿ 1,11,762, ಕೂಡ್ಲಿಗಿಯಲ್ಲಿ 1,14,678 ಹಾಗೂ ಕೊಟ್ಟೂರು ತಾಲ್ಲೂಕಿನಲ್ಲಿ 47,198 ಫಲಾನುಭವಿಗಳು ಸೇರಿ ಒಟ್ಟು 695979 ಬಾಕಿ ಉಳಿದಿವೆ. ಬಾಕಿ ಉಳಿದ ಫಲಾನುಭವಿಗಳು ಸಂಪೂರ್ಣ ಉಚಿತವಾಗಿ ಸೆಪ್ಟೆಂಬರ್ 30 ರೊಳಗಾಗಿ ಹತ್ತಿರದ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಕಡ್ಡಾಯವಾಗಿ ಇ–ಕೆವೈಸಿ ಮಾಡಿಸಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದ್ದಾರೆ.


**ಜನಶ್ರೀ ಟೈಮ್ಸ್**

**ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.**


# ಜಾಬ್ ಕಾರ್ಡ್ ಮೇಳಕ್ಕೆ ರೋಣ ಗಜೇಂದ್ರಗಡ ತಾಪಂ ಸಜ್ಜು : ಆ.15ರಿಂದ ವಿಶೇಷ ಅಭಿಯಾನ

ಜನಶ್ರೀ ಟೈಮ್ಸ್ ಸುದ್ದಿ

ರೋಣ: ಗ್ರಾಮೀಣ ಪ್ರದೇಶದ ಕುಟುಂಬಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ವಿಕಸಿತ ಭಾರತ?ಉ ಖಂಒ ಉ ಯೋಜನೆಯಡಿ ರೋಣ ತಾಲೂಕಿನಲ್ಲಿ ಜಾಬ್ ಕಾರ್ಡ್ ಮೇಳ ಹಾಗೂ ವಿಶೇಷ ಜಾಗೃತಿ ಅಭಿಯಾನವನ್ನು ಅಗಸ್ಟ 15 ರಿಂದ ಹಮ್ಮಿಕೊಳ್ಳಲಾಗುತ್ತಿದೆ ಎಂದು ರೋಣ ಹಾಗೂ ಗಜೇಂದ್ರಗಡ ತಾಲೂಕ ಪಂಚಾಯತ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ ಕಂದಕೂರ ಹೇಳಿದರು.



ತಾಲೂಕ ಪಂಚಾಯತ ಸಭಾ ಭವನದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು ಆಗಸ್ಟ್ 15ರಿಂದ ರಾಜ್ಯದಾದ್ಯಂತ ಗ್ರಾಮ ಪಂಚಾಯತ್ ಮಟ್ಟದಲ್ಲಿ ಜಾಬ್ ಕಾರ್ಡ್ ಮೇಳ ಆಯೋಜಿಸುವ ಹಿನ್ನೆಲೆಯಲ್ಲಿ ರೋಣ ಹಾಗೂ ಗಜೇಂದ್ರಗಡ ತಾಲೂಕು ಪಂಚಾಯತ್ ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿಯೂ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಗ್ರಾಮೀಣ ಕುಟುಂಬಗಳಿಗೆ ಉದ್ಯೋಗಾವಕಾಶ ಕಲ್ಪಿಸುವುದರ ಜೊತೆಗೆ ಹೆಚ್ಚಿನ ಸಂಖ್ಯೆಯಲ್ಲಿ ಮಾನವ ದಿನಗಳ ಸೃಷ್ಟಿಗೆ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಉದ್ದೇಶ ಹೊಂದಲಾಗಿದೆ ಎಂದರು.



ಜಾಬ್ ಕಾರ್ಡ್ ಹೊಂದಿರುವ ಕುಟುಂಬಗಳ ಮಾಹಿತಿಯನ್ನು ಪರಿಶೀಲಿಸುವುದು, ಅಗತ್ಯವಿರುವವ–ರಿಗೆ ಹೊಸ ಜಾಬ್ ಕಾರ್ಡ್ ಮಾಡಿಸಿಕೊಡುವುದು, ಜಾಬ್ ಕಾರ್ಡ್ ನವೀಕರಣ ಹಾಗೂ ಜ–ಏಜಅ ಪ್ರಕ್ರಿಯೆ ಪೂರ್ಣಗೊಳಿಸುವುದು ಸೇರಿದಂತೆ ಉದ್ಯೋಗದ ಬೇಡಿಕೆಯನ್ನು ಸ್ವೀಕ–ರಿಸುವ ಕಾರ್ಯಕ್ಕೆ ಆದ್ಯತೆ ನೀಡಲಾಗಿದೆ. ಕೆಲಸಕ್ಕಾಗಿ ಅರ್ಜಿ ಸಲ್ಲಿಸುವ ಕುಟುಂಬಗಳಿಗೆ ನಿಯಮಾನುಸಾರ ಸ್ವೀಕೃತಿ ನೀಡುವ ವ್ಯವಸ್ಥೆಯನ್ನು ಗ್ರಾಮ ಪಂಚಾಯತಿ ಯಲ್ಲಿ ಮಾಡಲಾಗುತ್ತಿದೆ ಎಂದರು. ಇದರ ಜೊತೆಗೆ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಮನೆ–ಮನೆ ಭೇಟಿ ಮೂಲಕ ಸಾರ್ವಜನಿಕರಿಗೆ ಯೋಜನೆಯ ಕುರಿತು ಮಾಹಿತಿ ನೀಡುವುದು, ಗ್ರಾಮ ಮಟ್ಟದಲ್ಲಿ ಸಭೆಗಳನ್ನು ನಡೆಸುವುದು, ಪೋಸ್ಟರ್ ಹಾಗೂ ಬ್ಯಾನರ್‌ಗಳ ಮೂಲಕ ಜಾಗೃತಿ ಮೂಡಿಸುವುದು ಮತ್ತು ಜಾಬ್ ಕಾರ್ಡ್ ಮೇಳದ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಲು ಸೂಚಿಸಲಾಗಿದೆ. ಗ್ರಾಮೀಣ ಜನರು ಯೋಜನೆಯ ಪ್ರಯೋಜನ ಪಡೆಯಲು ಅಗತ್ಯ ದಾಖಲೆಗಳೊಂದಿಗೆ ತಮ್ಮ ಗ್ರಾಮ ಪಂಚಾಯತಿಯನ್ನು ಸಂಪರ್ಕಿಸುವಂತೆ ತಿಳಿಸಲಾಗಿದೆ. ಕಾರ್ಮಿಕರ ಹಾಜರಾತಿ, ಕಾಮಗಾ–ರಿಗಳ ಪ್ರಗತಿ ಹಾಗೂ ಸಂಬಂಧಿತ ದಾಖಲೆಗಳನ್ನು ಡಿಜಿಟಲ್ ವ್ಯವಸ್ಥೆಯ ಮೂಲಕ ನಿರ್ವಹಿಸುವುದಕ್ಕೂ ಒತ್ತು ನೀಡಲಾಗಿದೆ. ಗ್ರಾಮ ಪಂಚಾಯತ್ ಮಟ್ಟದಲ್ಲಿ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಂಬಂಧಿತ ಕಾರ್ಯಕರ್ತರು ಸಮನ್ವಯದಿಂದ ಕಾರ್ಯನಿರ್ವಹಿಸಿ ಅರ್ಹ ಕುಟುಂಬಗಳಿಗೆ ಯೋಜನೆಯ ಸೌಲಭ್ಯ ತಲುಪಿಸುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. "ಉದ್ಯೋಗದ ಅವಕಾಶವನ್ನು ಅರ್ಹ ಕುಟುಂಬಗಳ ಮನೆಬಾಗಿಲಿಗೆ ತಲುಪಿಸುವುದು ನಮ್ಮ ಮುಖ್ಯ ಉದ್ದೇಶ. ಜಾಬ್ ಕಾರ್ಡ್, ಜ–ಏಜಅ ಹಾಗೂ ಉದ್ಯೋಗದ ಬೇಡಿಕೆ ಸಲ್ಲಿಕೆ ಸೇರಿದಂತೆ ಯಾವುದೇ ಮಾಹಿತಿ ಅಗತ್ಯವಿದ್ದರೂ ಸಾರ್ವಜನಿಕರು ತಮ್ಮ ಗ್ರಾಮ ಪಂಚಾಯತಿಯನ್ನು ಸಂಪರ್ಕಿಸಬೇಕು. ಯೋಜನೆಯ ಅನುಷ್ಠಾನದಲ್ಲಿ ಜನರ ಸಹಕಾರ ಅತ್ಯಂತ ಮುಖ್ಯ" ಎಂದು ತಿಳಿಸಿದರು.

ಜನರು ಜಾಬ್ ಕಾರ್ಡ್ ಮೇಳದ ಸದುಪಯೋಗ ಪಡೆದುಕೊಂಡು ಉದ್ಯೋಗದ ಬೇಡಿಕೆಯನ್ನು ಸಲ್ಲಿಸಿ, ಗ್ರಾಮೀಣ ಅಭಿವೃದ್ಧಿ ಕಾರ್ಯಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಹಾಗೂ ಸ್ಥಳೀಯ ಮಟ್ಟದಲ್ಲಿ ಉದ್ಯೋಗ ಮಾಡುವಂತೆ ಜನರಿಗೆ ಈ ಮಲಕ ಮನವಿ ಮಾಡಿಕೊಳ್ಳುತ್ತೇನೆ ಚಂದ್ರಶೇಖರ ಬಿ. ಕಂದಕೂರ, ಕಾರ್ಯನಿರ್ವಾಹಕ ಅಧಿಕಾರಿಗಳು ತಾಪಂ ರೋಣ ಹಾಗೂ ಗಜೇಂದ್ರಗಡ

## ಭಾರಿ ಮಳೆಯಿಂದ ಮುಂಬೈನ ಕುರ್ಲಾ ಪ್ರದೇಶದಲ್ಲಿ ಭೂಕುಸಿತ, ಇಬ್ಬರ ಸಾವು



ಮುಂಬೈ: ಭಾರಿ ಮಳೆಯ ಹಿನ್ನೆಲೆಯಲ್ಲಿ ಇಂದು ಮುಂಜಾನೆ ಮುಂಬೈನ ಕುರ್ಲಾ ಪ್ರದೇಶದಲ್ಲಿ ಭೂಕುಸಿತ ಸಂಭವಿಸಿದ್ದು, ಇಬ್ಬರು ಮೃತಪಟ್ಟಿದ್ದಾರೆ. 6ರಿಂದ 8 ಮಂದಿ ಅವಶೇಷಗಳಡಿ ಸಿಲುಕಿರುವ ಸಾಧ್ಯತೆ ಇದೆ ಎಂದು ಬೃಹನ್ಮುಂಬೈ ಮಹಾನಗರ ಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

ಚಿರಾಗ್ ನಗರದ ಗೌಶಿಯಾ ಚಾಲ್‌ನಲ್ಲಿ ಮುಂಜಾನೆ 3.48ಕ್ಕೆ ಭೂಕುಸಿತ ಸಂಭವಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಸ್ಥಳದಲ್ಲಿ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಮುಂದುವರಿದಿದ್ದು, ಅಗ್ನಿಶಾಮಕ ದಳ, ಪೊಲೀಸರು, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್‌ಡಿಆರ್‌ಎಫ್), ಆಂಬ್ಯುಲೆನ್ಸ್ ಸೇವೆ ಹಾಗೂ ನಾಗರಿಕ ಸಂಸ್ಥೆಯ ವಾರ್ಡ್ ಸಿಬ್ಬಂದಿಯ ತಂಡಗಳನ್ನು ನಿಯೋಜಿಸಲಾಗಿದೆ. ಘಟನೆಯಲ್ಲಿ ಇಬ್ಬರು ಮೃತಪಟ್ಟಿರುವ ಶಂಕೆ ಇದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮೃತರ ಮಾಹಿತಿ ಕಲೆ ಹಾಕಲಾಗುತ್ತಿದೆ ಗಾಯಗೊಂಡಿರುವ ಸೋಹೆಲ್ ಅನ್ಸಾರಿ (18),ಮೊಹಮದ್ ಅನ್ಸಾರಿ (14) ಎಂಬುವ ಇಬ್ಬರನ್ನೂ ಕುರ್ಲಾದ ಬಿಎಂಸಿ ನಿರ್ವಹಣೆಯ ಭಾಭಾ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಆರೋಗ್ಯ ಸ್ಥಿರವಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಮುಂಬೈ ಮೇಯರ್ ರಿತು ತಾವ್ಡೆ ಕೂಡ ಸ್ಥಳಕ್ಕೆ ಭೇಟಿ ನೀಡಿ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಯ ಮೇಲ್ವಿಚಾರಣೆ ನಡೆಸಿದರು.

## ಮುಂಬೈನಲ್ಲಿ ಬಹುಮಹಡಿ ಕಟ್ಟಡದಲ್ಲಿ ಅಗ್ನಿ ಅವಘಡ, ಇಬ್ಬರು ಸಾವು



ಮುಂಬೈ: ಇಲ್ಲಿನ ವಿಲೆ ಪಾರ್ಲೆ ಪ್ರದೇಶದ 12 ಅಂತಸ್ತಿನ ವಸತಿ ಕಟ್ಟಡವೊಂದರಲ್ಲಿ ಸಂಭವಿಸಿದ ಅಗ್ನಿ ಅವಘಡದಲ್ಲಿ ಮಗು ಮತ್ತು ಮಹಿಳೆ ಮೃತಪಟ್ಟಿದ್ದು, ಆರು ಮಂದಿ ಗಾಯಗೊಂಡಿದ್ದಾರೆ.ಕಳೆದ ರಾತ್ರಿ ಸುಮಾರ ಶಾಂತಾಭವನ ಕಟ್ಟಡದ 11ನೇ ಮಹಡಿಯಲ್ಲಿರುವ ಎರಡು ಫ್ಲ್ಯಾಟ್‌ಗಳಲ್ಲಿ ಬೆಂಕಿ ಕಾಣಿಸಿಕೊಂಡಿತು. ಸುಮಾರು 4,000 ಚದರ ಅಡಿ ಪ್ರದೇಶದಲ್ಲಿದ್ದ ಎರಡು ಮನೆಗಳ ವಿದ್ಯುತ್ ತಂತಿಗಳು, ವಿದ್ಯುತ್ ಉಪಕರಣಗಳು, ಹವಾನಿಯಂತ್ರಣ ಘಟಕ (ಎಸಿ) ಹಾಗೂ ಇತರ ಗೃಹೋಪಯೋಗಿ ವಸ್ತುಗಳಿಗೆ ಬೆಂಕಿ ವ್ಯಾಪಿಸಿತ್ತು ಎಂದು ಬೃಹನ್ಮುಂಬೈ ಮಹಾನಗರ ಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

ಅಗ್ನಿ ಅವಘಡದಲ್ಲಿ ಇಬ್ಬರು ಅಗ್ನಿಶಾಮಕ ಸಿಬ್ಬಂದಿ ಸೇರಿದಂತೆ ಎಂಟು ಮಂದಿ ಗಾಯಗೊಂಡಿದ್ದು, ಅವರನ್ನು ಎರಡು ಆಸ್ಪತ್ರೆಗಳಿಗೆ ದಾಖಲಿಸಲಾಯಿತು.ಎರಡೂವರೆ ವರ್ಷದ ಅಬೀರ್ ಎಂಬ ಮಗು ಹಾಗೂ ಅಂಕಿತಾ (23) ಎಂಬ ಮಹಿಳೆಯನ್ನು ನಾನಾವತಿ ಆಸ್ಪತ್ರೆಗೆ ಕರೆತರುವಷ್ಟರಲ್ಲಿ ಮೃತಪಟ್ಟಿದ್ದಾರೆ ಎಂದು ನಾಗರಿಕ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಗಾಯಗೊಂಡಿದ್ದ ಇತರ ನಾಲ್ವರಿಗೆ ಇದೇ ಆಸ್ಪತ್ರೆಯಲ್ಲಿ ಚಿಕಿತ್ಸೆನೀಡಲಾಗುತ್ತಿದೆ. ಗಾಯಗೊಂಡ ಅಗ್ನಿಶಾಮಕ ಸಿಬ್ಬಂದಿ ಮನೋಜ್ ಸೋನವಣೆ (30) ಮತ್ತು ಶಿವ ದ್ವಿವೇದಿ (29) ಅವರನ್ನು ಸಮೀಪದ ಕೂಪರ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಬಳಿಕ ಇಬ್ಬರನ್ನೂ ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಗ್ನಿ ಅವಘಡದ ಮಾಹಿತಿ ದೊರೆತ ತಕ್ಷಣ ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ಕೈಗೊಂಡರು. ಇಂದು ಮುಂಜಾನೆ 1 ಗಂಟೆ ವೇಳೆಗೆ ಬೆಂಕಿಯನ್ನು ಸಂಪೂರ್ಣವಾಗಿ ನಂದಿಸಲಾಯಿತು. ಅಗ್ನಿ ಅವಘಡಕ್ಕೆ ನಿಖರ ಕಾರಣವೇನು ಎಂಬುದರ ಕುರಿತು ತನಿಖೆ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಭೀಮನ ಅಮಾವಾಸ್ಯೆಯಂದು ಪತಿಯನ್ನೇ ಕೊಂದ ಪತ್ನಿ

ಕೋಲಾರ: ಭೀಮನ ಅಮಾವಾಸ್ಯೆಯಂದು ಗಂಡನಿಗೆ ಪೂಜೆ ಮಾಡುವ ಬದಲು ಪತಿಯನ್ನೇ ಕೊಲೆ ಮಾಡಿದ ಘಟನೆ ಕೋಲಾರ ಜಿಲ್ಲೆಯ ಚೆನ್ನಸಂದ್ರ ಗ್ರಾಮದಲ್ಲಿ ನಡೆದಿದೆ. ಮೃತರನ್ನು ನಾರಾಯಣಸ್ವಾಮಿ (68) ಎಂದು ಗುರುತಿಸಲಾಗಿದ್ದು, ಆರೋಪಿತ ಪತ್ನಿ ಜಗದಾಂಭ (58) ಎಂದು ತಿಳಿದುಬಂದಿದೆ.



ದಂಪತಿ ನಡುವೆ ಅಸಮಾಧಾನ ಉಂಟಾಗಿದ್ದರಿಂದ ಇಬ್ಬರೂ ಪ್ರತ್ಯೇಕವಾಗಿ ವಾಸಿಸುತ್ತಿದ್ದರು. ಆದರೆ ಕಳೆದ ಎರಡು-ಮೂರು ದಿನಗಳಿಂದ ಹಣದ ವಿಚಾರವಾಗಿ ಪತಿಯನ್ನು ಪುಸಲಾಯಿಸಿದ ಜಗದಾಂಭ, ಅವರನ್ನು ತೋಟದ ಮನೆಗೆ ಕರೆತಂದಿದ್ದಳು ಎನ್ನಲಾಗಿದೆ. ಭೀಮನ ಅಮಾವಾಸ್ಯೆಯ ರಾತ್ರಿ ಊಟದಲ್ಲಿ 10 ನಿದ್ರೆ ಮಾತ್ರೆಗಳನ್ನು ಬೆರೆಸಿ ಪತಿಗೆ ನೀಡಿದ್ದಾಳೆ. ಮಾತ್ರೆ ಸೇವಿಸಿ ನಾರಾಯಣಸ್ವಾಮಿ ನಿದ್ರೆಗೆ ಜಾರಿದ ಬಳಿಕ ಹಗ್ಗದಿಂದ ಕುತ್ತಿಗೆ ಬಿಗಿದು ಕೊಲೆ ಮಾಡಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ. ಕೊಲೆ ಮಾಡಿದ ಬಳಿಕ ಜಗದಾಂಭ ತಾನೇ ಪೊಲೀಸ್ ಠಾಣೆಗೆ ತೆರಳಿ ಶರಣಾಗಿದ್ದಾಳೆ. ಪೊಲೀಸರ ವಿಚಾರಣೆ ವೇಳೆ, ಜಮೀನು ಮಾರಾಟದಿಂದ ಬಂದ ಹಣವನ್ನು ಪತಿ ತನ್ನ ಕೈಗೆ ನೀಡಿರಲಿಲ್ಲ. ಅಲ್ಲದೆ ಉಳಿದ ಜಮೀನನ್ನೂ ಮಾರಾಟ ಮಾಡಿ ಹಣವನ್ನು ನೀಡುವುದಿಲ್ಲ ಎಂಬ ಆತಂಕದಿಂದ ಕೊಲೆ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ವೇಮಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಜನಶ್ರೀ ಟೈಮ್ಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಇಂದಿನಿಂದ ವಿಧಾನಮಂಡಲ ಅಧಿವೇಶನ : ಆಡಳಿತ-ಪ್ರತಿಪಕ್ಷಗಳ ವಾಕ್ಸಮರಕ್ಕೆ ವೇದಿಕೆ ಸಿದ್ಧ

ಬೆಂಗಳೂರು: ನಾಳೆಯಿಂದ ವಿಧಾನ ಮಂಡಲದ ಉಭಯ ಸದನಗಳ ಮಳೆಗಾಲದ ಅಧಿವೇಶನ ಆರಂಭವಾಗಲಿದ್ದು, ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ವಾಕ್ಸಮರ ಏರ್ಪಡುವ ಸಾಧ್ಯತೆಗಳಿವೆ. ರಾಜ್ಯದಲ್ಲಿನ ಭೀಕರ ಬರ ಪರಿಸ್ಥಿತಿ, ಕೆಲವೆಡೆ ಉಂಟಾಗಿರುವ ಅತಿವೃಷ್ಟಿ, ಬಿಡದಿ ಉಪನಗರ ಯೋಜನೆ ವಿರೋಧಿಸಿ ರೈತರು ನಡೆಸುತ್ತಿರುವ ಹೋರಾಟ, ತಮಿಳುನಾಡಿಗೆ ಕಾವೇರಿ ನದಿ ನೀರು ಹಂಚಿಕೆ ವಿಚಾರ, ಬಿಎಂಐಸಿ ಯೋಜನೆ, ನೈಸ್ ಸಂಸ್ಥೆಯಿಂದ ನಿಯಮ ಬಾಹಿರವಾಗಿ ಟೋಲ್ ಸಂಗ್ರಹಿಸುತ್ತಿರುವ ಆರೋಪ, ಸಂಪುಟ ವಿಸ್ತರಣೆಯ ಅಸಮಾಧಾನ, ಖಾತೆ ಹಂಚಿಕೆ ವಿಳಂಬ ಮೊದಲಾದ ವಿಚಾರಗಳು ಅಧಿವೇಶನದಲ್ಲಿ ಪ್ರಮುಖವಾಗಿ ಪ್ರಸ್ತಾಪಗೊಂಡು ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಆರೋಪ-ಪ್ರತ್ಯಾರೋಪ ತಾರಕಕ್ಕೇರುವ ಸಾಧ್ಯತೆಗಳಿವೆ.

ರಾಜ್ಯ ಸರ್ಕಾರ ಹಾಗೂ ಆಡಳಿತಾರೂಢ ಕಾಂಗ್ರೆಸ್ ಪಕ್ಷವನ್ನು ಇಕ್ಕಟ್ಟಿಗೆ ಸಿಲುಕಿಸಲು ವಿರೋಧ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಸಜ್ಜಾಗಿವೆ. ಅದೇ ರೀತಿ ಸರ್ಕಾರದ ಸಮರ್ಥನೆಗೆ ಕಾಂಗ್ರೆಸ್ ಪಕ್ಷವೂ ಕೂಡ ಸಿದ್ಧತೆ ನಡೆಸಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ಅವ್ಯವಹಾರದ ಆರೋಪ ಎದುರಿಸುತ್ತಿರುವ ನಾಗೇಂದ್ರ ಅವರನ್ನು ಸಂಪುಟಕ್ಕೆ ಸೇರ್ಪಡೆ ಮಾಡಿಕೊಂಡಿರುವುದಕ್ಕೆ ಪ್ರತಿಪಕ್ಷ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಸಂಪುಟದಿಂದ ಕೈಬಿಡುವಂತೆ



ಆಗ್ರಹಿಸುತ್ತಿದೆ. ಈ ವಿಚಾರವನ್ನು ಸದನದಲ್ಲಿ ಪ್ರಮುಖವಾಗಿ ಪ್ರಸ್ತಾಪಿಸುವುದಾಗಿ ಪ್ರಕಟಿಸಿದೆ. ನಾಳೆಯಿಂದ ಆ.27ರವರೆಗೆ 10 ದಿನಗಳ ಕಾಲ ಅಧಿವೇಶನ ನಡೆಯಲಿದ್ದು, ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಸಚಿವಾಲಯಗಳು ಸಕಲ ಸಿದ್ಧತೆ ಮಾಡಿಕೊಂಡಿವೆ. ಇಂದು ಸಹ ವಿಧಾನಸೌಧದ ಸಿದ್ಧತಾ ಕಾರ್ಯ ಭರದಿಂದ ಸಾಗಿತ್ತು. ನಿರೀಕ್ಷೆಯಂತೆ ಮೊದಲ ದಿನವಾದ ನಾಳೆ ಆರಂಭದಲ್ಲಿ ಅಗಲಿದ ಗಣ್ಯರಿಗೆ ಶ್ರದ್ಧಾಂಜಲಿ ಸಲ್ಲಿಸಲಾಗುತ್ತದೆ. ಅನಂತರ ಸರ್ಕಾರದ ಅಧಿಕೃತ ಕಾರ್ಯಕಲಾಪಗಳು ನಡೆಯಲಿವೆ. ಬರಪೀಡಿತ ಪ್ರದೇಶಗಳನ್ನು ಘೋಷಣೆ ಮಾಡಿ ಬರಪರಿಹಾರ ನೀಡುತ್ತಿಲ್ಲ. ರೈತರು ಬೆಳೆ ಕಳೆದುಕೊಂಡು ಕಂಗಾಲಾಗಿದ್ದಾರೆ. ಕುಡಿಯುವ ನೀರಿಗೂ ಸಮಸ್ಯೆ ಎದುರಾಗುವ ಸಾಧ್ಯತೆಗಳಿದ್ದು, ಈ ವಿಚಾರದಲ್ಲಿ ಪಕ್ಷ ಭೇದ ಮರೆತು ಚರ್ಚೆ ನಡೆಸುವ ಸಾಧ್ಯತೆಗಳಿವೆ. ಬಿಡದಿ ಉಪನಗರ ಯೋಜನೆ ವಿಚಾರದಲ್ಲಿ ರೈತರಿಗೆ ಬೆಂಬಲ ವ್ಯಕ್ತಪಡಿಸಿ ಪ್ರತಿಭಟಿಸುತ್ತಿರುವ ವಿರೋಧ ಪಕ್ಷಗಳು ಪ್ರಮುಖವಾಗಿ ಈ ವಿಷಯ ಪ್ರಸ್ತಾಪಿಸಲಿವೆ. ಈ ವಿಚಾರದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ವಾಗ್ವಾದ ಕಾವೇರಿದ ದನಿಯಲ್ಲಿ ನಡೆಯುವ ಸಾಧ್ಯತೆಗಳು ಹೆಚ್ಚಾಗಿವೆ.

ಸಂಕಷ್ಟ ಪರಿಸ್ಥಿತಿಯಲ್ಲೂ ತಮಿಳುನಾಡಿಗೆ ಕಾವೇರಿ ನದಿಯಿಂದ ನೀರು ಬಿಡಲು ಆದೇಶ ನೀಡಿರುವ ವಿಚಾರವೂ ಪ್ರತಿಧ್ವನಿಸಲಿದ್ದು, ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಆಗ್ರಹ ಕೇಳಿಬರಲಿದೆ. ಅಲ್ಲದೆ, ಸಂಪುಟ ವಿಸ್ತರಣೆ ಬೆನ್ನಲ್ಲೆ ಕಾಂಗ್ರೆಸ್‌ನಲ್ಲಿ ಉಂಟಾಗಿರುವ ಅಸಮಾಧಾನ, ಖಾತೆ ಹಂಚಿಕೆ ವಿಳಂಬದ ವಿಚಾರವೂ ಸಂದರ್ಭೋಚಿತವಾಗಿ ಪ್ರಸ್ತಾಪವಾಗುವ ಸಾಧ್ಯತೆಗಳು ಹೆಚ್ಚಾಗಿವೆ. ಗ್ಯಾರಂಟಿ ಸವಲತ್ತುಗಳು ಫಲಾನುಭವಿಗಳಿಗೆ ಸಕಾಲದಲ್ಲಿ ತಲುಪದಿರುವುದು, ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ನೀಡದ ಆರೋಪ, ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಸೇರಿಂತೆ ನಾಡು ಎದುರಿಸುತ್ತಿರುವ ಹತ್ತು ಹಲವು ಜ್ವಲಂತ ಸಮಸ್ಯೆಗಳ ಮೇಲೆ ಶಾಸಕರು ಬೆಳಕು ಚೆಲ್ಲಿ ಸರ್ಕಾರದಿಂದ ಸೂಕ್ತ ಉತ್ತರ ಪಡೆಯುವ ಸಾಧ್ಯತೆಗಳಿವೆ.

ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾದ ಬಳಿಕ ಮೊದಲ ಅಧಿವೇಶನ ಇದಾಗಿದೆ. ಸಿದ್ದರಾಮಯ್ಯ ಅವರು ಎರಡನೇ ಬಾರಿಗೆ ಮಾಜಿ ಮುಖ್ಯಮಂತ್ರಿಯಾದ ಬಳಿಕ ನಡೆಯುತ್ತಿರುವ ಮೊದಲ ಅಧಿವೇಶನವಾಗಿದೆ. ಹಾಗೆಯೇ ಶಾಸಕರಾಗಿದ್ದ ಕೆಲವರು ಸಚಿವರಾಗಿದ್ದಾರೆ. ಸಚಿವರಾಗಿದ್ದ ಕೆಲವರು ಮಾಜಿ ಸಚಿವರಾಗಿದ್ದಾರೆ. ಹೀಗಾಗಿ ಅವರ ಸ್ಥಾನಗಳು ಬದಲಾಗಿರುವುದರಿಂದ ಅಧಿವೇಶನ ತೀವ್ರ ಕುತೂಹಲ ಮೂಡಿಸಿದೆ.

# ಬೆಂಗಳೂರು ಮಂಗಳೂರು ನಡುವೆ ವಂದೇ ಭಾರತ್ ರೈಲು ಸಂಚಾರಕ್ಕೆ ತಯಾರಿ

ಮಂಗಳೂರು: ನೈಋತ್ಯ ರೈಲ್ವೆಯ ಮೈಸೂರು ವಿಭಾಗವು ಸಕಲೇಶಪುರ-ಸುಬ್ರಹ್ಮಣ್ಯ ರಸ್ತೆ ಘಾಟ್ ವಿಭಾಗದಲ್ಲಿ ಸ್ವಯಂಚಾಲಿತ ತುರ್ತು ಬ್ರೇಕ್ ಅಳವಡಿಸಿದ ವಂದೇ ಭಾರತ್ ಎಕ್ಸ್ ಪ್ರೆಸ್ ರೇಕ್‌ನ ಕ್ಷೇತ್ರ ಪ್ರಯೋಗಗಳನ್ನು ಪ್ರಾರಂಭಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಬೆಂಗಳೂರು-ಮಂಗಳೂರು ಮಾರ್ಗ ದಲ್ಲಿ ಸೆಮಿ-ಹೈ-ಸ್ಪೀಡ್ ರೈಲನ್ನು ನಿರ್ವಹಿಸುವ ಕಾರ್ಯಸಾಧ್ಯತೆಯನ್ನು ನಿರ್ಣಯಿಸುವಲ್ಲಿ ಇದು ಪ್ರಮುಖ ಹೆಜ್ಜೆಯಾಗಿದೆ ಎಂದು ಅವರು ಹೇಳಿದರು.

ಅಧಿಕಾರಿಗಳ ಪ್ರಕಾರ, ಚೆನ್ನೈನ ಇಂಟಿಗ್ರಲ್ ಕೋಚ್ ಫ್ಯಾಕ್ಟರಿ (ಐಸಿಎಫ್) ವಿಶೇಷವಾಗಿ ತಯಾರಿಸಿದ 20 ಕಾರುಗಳ ರೇಕ್ ಕಳೆದ ವಾರ ಮೈಸೂರಿಗೆ ಬಂದಿತ್ತು.ನಿನ್ನೆ ಮೈಸೂರಿನಲ್ಲಿ ನಡೆಸಿದ ಸ್ಥಿರ ಪ್ರಯೋಗಗಳ ನಂತರ, ಕ್ಷೇತ್ರ ಪರೀಕ್ಷೆಗಳಿಗಾಗಿ ರೇಕ್ ಅನ್ನು ಅದೇ ರಾತ್ರಿ ಸಕಲೇಶಪುರಕ್ಕೆ ಸ್ಥಳಾಂತರಿಸಲಾಯಿತು. ಪಿಟಿಐ ಜೊತೆ ಮಾತನಾಡಿದ ಮೈಸೂರು ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಮುದಿತ್ ಮಿತ್ತಲ್ ಅವರು ಇಂದು ಬೆಳಿಗ್ಗೆ ಪ್ರಯೋಗಗಳು ಪ್ರಾರಂಭವಾದವು, ಸಂಶೋಧನಾ ವಿನ್ಯಾಸಗಳು ಮತ್ತು ಮಾನದಂಡಗಳ ಸಂಸ್ಥೆ ಸಿಬ್ಬಂದಿ ವಿವಿಧ ತಾಂತ್ರಿಕ ಮತ್ತು ಕಾರ್ಯಾಚರಣೆಯ ನಿಯತಾಂಕಗಳನ್ನು ಪರಿಶೀಲಿಸಲು ಬಂದಿದ್ದಾರೆ ಎಂದು ಮೈಸೂರು ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಮುದಿತ್ ಮಿತ್ರಲ್ ಹೇಳಿದರು.

ಇಂದು ಮಧ್ಯಾಹ್ನದವರೆಗೆ ಪ್ರಯೋಗಗಳು ಮುಂದುವರಿಯಲು ನಿರ್ಧರಿಸಲಾಗಿದೆ. ಸಕಲೇಶಪುರ ಮತ್ತು ಸುಬ್ರಹ್ಮಣ್ಯ ರಸ್ತೆಯ ನಡುವಿನ ಘಾಟ್ ವಿಭಾಗವು ಬೆಂಗಳೂರು-ಮಂಗಳೂರು ರೈಲು ಮಾರ್ಗದಲ್ಲಿ ತಾಂತ್ರಿಕವಾಗಿ ಹೆಚ್ಚು ಬೇಡಿಕೆಯಿರುವ ಪ್ರದೇಶಗಳಲ್ಲಿ ಒಂದಾಗಿದೆ, ಇದು ಕಡಿದಾದ ಇಳಿಜಾರುಗಳು, ತೀಕ್ಷ್ಣವಾದ ತಿರುವುಗಳು, ಸುರಂಗಗಳು ಮತ್ತು ಸೇತುವೆಗಳನ್ನು ಒಳಗೊಂಡಿದೆ. ಈ ವಿಭಾಗವು ಪಶ್ಚಿಮ ಘಟ್ಟಗಳ ಮೂಲಕ ಹಾದುಹೋಗುತ್ತದೆ ಮತ್ತು ಸಾಂಪ್ರದಾಯಿಕವಾಗಿ ರೈಲುಗಳಿಗೆ ಕಾರ್ಯಾಚರಣೆಯ ಸವಾಲುಗಳನ್ನು ಒಡ್ಡಿದೆ, ವಿಶೇಷವಾಗಿ ಇಳಿಜಾರುಗಳಲ್ಲಿ ವೇಗ, ಬ್ರೇಕಿಂಗ್ ಮತ್ತು ಸುರಕ್ಷಿತ ಚಲನೆಯನ್ನು ನಿರ್ವಹಿಸುವಲ್ಲಿ. ಘಾಟ್ ವಿಭಾಗದ ಪರಿಸ್ಥಿತಿಗಳಲ್ಲಿ ಬ್ರೇಕಿಂಗ್, ವೇಗವರ್ಧನೆ, ಸ್ಥಿರತೆ ಮತ್ತು ಇತರ ಕಾರ್ಯಾಚರಣೆಯ ನಿಯತಾಂಕಗಳನ್ನು ಒಳಗೊಂಡಂತೆ ಈ ನಿರ್ಣಾಯಕ ವಿಭಾಗದಲ್ಲಿ ಇನ್ನೂ ಕೆಲವು ದಿನಗಳವರೆಗೆ ಪ್ರಯೋಗಗಳು ಮುಂದುವರಿಯುತ್ತವೆ. ಸ್ವಯಂಚಾಲಿತ ತುರ್ತು ಬ್ರೇಕಿಂಗ್ ವ್ಯವಸ್ಥೆಯನ್ನು ಸಹ ವ್ಯಾಯಾಮದ ಭಾಗವಾಗಿ ಮೌಲ್ಯಮಾಪನ ಮಾಡಲಾಗುತ್ತಿದೆ ಎಂದು ಮಿತ್ತಲ್ ಹೇಳಿದರು.ಬೆಂಗಳೂರು-ಮಂಗಳೂರು ರೈಲು ಮಾರ್ಗವು ಪಶ್ಚಿಮ ಘಟ್ಟಗಳನ್ನು ಸಕಲೇಶಪುರ-ಸುಬ್ರಹ್ಮಣ್ಯ ರಸ್ತೆ



ವಿಭಾಗದ ಮೂಲಕ ಹಾದುಹೋಗುತ್ತದೆ ಎಂದು ಅಧಿಕಾರಿಗಳು ಗಮನಿಸಿದರು, ಇದನ್ನು ಮೂಲತಃ ಮೀಟರ್ ಗೇಜ್ ಮಾರ್ಗವಾಗಿ ನಿರ್ಮಿಸಲಾಯಿತು ಮತ್ತು ನಂತರ ಬ್ರಾಡ್ ಗೇಜ್ ಆಗಿ ಪರಿವರ್ತಿಸಲಾಯಿತು.ಈ ಮಾರ್ಗವು ರಾಜ್ಯ ರಾಜಧಾನಿ ಮತ್ತು ಕರಾವಳಿ ಪ್ರದೇಶದ ನಡುವಿನ ಪ್ರಮುಖ ರೈಲು ಸಂಪರ್ಕವಾಗಿದೆ ಮತ್ತು ಪ್ರಯಾಣಿಕರು ಮತ್ತು ಸರಕು ಸಾಗಣೆ ಎರಡನ್ನೂ ನಿರ್ವಹಿಸುತ್ತದೆ ಎಂದು ಅವರು ಹೇಳಿದರು. ಪ್ರಾಯೋಗಿಕ ಪರೀಕ್ಷೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸುವುದು ಮತ್ತು ಅಗತ್ಯ ಸುರಕ್ಷತಾ ಅನುಮತಿಗಳು ಬೆಂಗಳೂರು ಮತ್ತು ಮಂಗಳೂರು ನಡುವೆ ವಂದೇ ಭಾರತ್ ಎಕ್?ಸಪ್ರೆಸ್ ಸೇವೆಯನ್ನು ಪರಿಚಯಿಸಲು ದಾರಿ ಮಾಡಿಕೊಡುತ್ತದೆ ಎಂದು ರೈಲ್ವೆ ಅಧಿಕಾರಿಗಳು ಹೇಳಿದ್ದಾರೆ. ಪ್ರಸ್ತಾವಿತ ಸೇವೆಯು ರಾಜ್ಯ ರಾಜಧಾನಿ ಮತ್ತು ಕರಾವಳಿ ನಗರದ ನಡುವೆ ವೇಗವಾದ ರೈಲು ಸಂಪರ್ಕವನ್ನು ಒದಗಿಸುತ್ತದೆ ಮತ್ತು ಮಾರ್ಗದಲ್ಲಿ ಪ್ರಮುಖ ಪಟ್ಟಣಗಳಿಗೆ ಮತ್ತು ಅಲ್ಲಿಂದ ಪ್ರಯಾಣಿಸುವ ಪ್ರಯಾಣಿಕರಿಗೆ ಸಂಪರ್ಕವನ್ನು ಸುಧಾರಿಸುತ್ತದೆ ಎಂದು ನಿರೀಕ್ಷಿಸಲಾಗಿದೆ. ನಿಯಮಿತ ಸೇವೆಯ ಕುರಿತು ಯಾವುದೇ ನಿರ್ಧಾರ ತೆಗೆದುಕೊಳ್ಳುವ ಮೊದಲು ಮಾರ್ಗದಲ್ಲಿ ಕಾರ್ಯಾಚರಣೆಗಾಗಿ ವಂದೇ ಭಾರತ್ ರೇಕ್‌ನ ಸೂಕ್ತತೆಯನ್ನು ಸ್ಥಾಪಿಸುವ ರೈಲ್ವೆ ಪ್ರಕ್ರಿಯೆಯ ಭಾಗವಾಗಿ ಕ್ಷೇತ್ರ ಪ್ರಯೋಗಗಳನ್ನು ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಈಜಿಪುರ ಬಫರ್ ರಸ್ತೆ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಲು ಮಹೇಶ್ವರ್ ರಾವ್ ಸೂಚನೆ

ಬೆಂಗಳೂರು: ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಈಜಿಪುರ ಬಳಿಯ ಬಫರ್ ರಸ್ತೆ (ಸಂಚಾರಯುಕ್ತ ರಸ್ತೆ) ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಬಿಎ ವ್ಯಾಪ್ತಿಯ ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ಮಾತನಾಡಿದ ಅವರು, ಲೋವರ್ ಅಗರಂ ಜಂಕ್ಷನ್‌ನಿಂದ ಈಜಿಪುರ ರಸ್ತೆಯವರೆಗೆ ಪ್ರಗತಿಯಲ್ಲಿರುವ 5.45 ಕಿ.ಮೀ. ಉದ್ದದ ಬಫರ್ ರಸ್ತೆ ಕಾಮಗಾರಿಗೆ ವೇಗ ನೀಡಿ, ತ್ವರಿತವಾಗಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಲೋವರ್ ಅಗರಂ ರಸ್ತೆಯಿಂದ ಈಜಿಪುರ ರಸ್ತೆಯವರೆಗೆ 2.45 ಕಿ.ಮೀ. ಹಾಗೂ ಈಜಿಪುರ ರಸ್ತೆಯಿಂದ ಸರ್ಜಾಪುರ ರಸ್ತೆಯವರೆಗೆ 3 ಕಿ.ಮೀ. ಸೇರಿದಂತೆ ಒಟ್ಟು 5.45 ಕಿ.ಮೀ. ಉದ್ದದ ಬಫರ್ ರಸ್ತೆ ನಿರ್ಮಿಸಲಾಗುತ್ತಿದೆ. ಈ ಸಂಬಂಧ ಈಜಿಪುರ ಬಳಿ ಬಫರ್ ರಸ್ತೆ ನಿರ್ಮಾಣಕ್ಕಾಗಿ ರಕ್ಷಣಾ ಇಲಾಖೆಯಿಂದ 5.34 ಎಕರೆ ಜಾಗವನ್ನು ಹಸ್ತಾಂತರಿಸಲಾಗಿದ್ದು, ಈ ಭಾಗದಲ್ಲಿ ಶೇ. 90ರಷ್ಟು ತಡೆಗೋಡೆ ಕಾಮಗಾರಿ ಪೂರ್ಣಗೊಂಡಿದೆ. ಜೊತೆಗೆ, ಚರಂಡಿ ಹಾಗೂ ಪಾದಚಾರಿ ಮಾರ್ಗ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿವೆ. ರಸ್ತೆ ನಿರ್ಮಾಣದ ಸಂದರ್ಭದಲ್ಲಿ ಮಳೆ ನೀರು ವ್ಯರ್ಥವಾಗಿ ಹರಿದುಹೋಗದೆ ಭೂಮಿಗೆ ಇಂಗುವಂತೆ



ಸೂಕ್ತ ವಿನ್ಯಾಸ ರೂಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬಫರ್ ರಸ್ತೆಗೆ ಹೊಂದಿಕೊಂಡಂತಿರುವ ಎಸ್.ಟಿ ಬೆಡ್ ಕಾಲೋನಿ ಪ್ರದೇಶವು ತಗ್ಗು ಪ್ರದೇಶವಾಗಿರುವುದರಿಂದ, ಸದರಿ ಪ್ರದೇಶದಲ್ಲಿ ಪ್ರವಾಹ ಉಂಟಾಗದಂತೆ ಮಳೆ ನೀರು ಸರಾಗವಾಗಿ ಹರಿದು ಹೋಗಲು ಬಫರ್ ವ್ಯಾಪ್ತಿಯಲ್ಲಿ ಸೂಕ್ತ ಮಾದರಿಯ ಮಳೆ ನೀರು ಚರಂಡಿಗಳನ್ನು ನಿರ್ಮಾಣ ಮಾಡಲು ಕ್ರಮವಹಿಸುವಂತೆ ಸೂಚಿಸಿದರು.

**ಈಜಿಪುರ ಮೇಲ್ಸೇತುವೆ ಕಾಮಗಾರಿ ಪರಿಶೀಲನೆ:**

ಈಜಿಪುರ ಮೇಲ್ಸೇತುವೆ ಕಾಮಗಾರಿಯ ಪ್ರಗತಿಯನ್ನು ಪರಿಶೀಲಿಸಿದ ಮುಖ್ಯ ಆಯುಕ್ತರು, ಕಾಮಗಾರಿಗೆ ಮತ್ತಷ್ಟು ವೇಗ ನೀಡಿ, ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸಿಕೊಂಡು ಆದಷ್ಟು ಬೇಗ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಸೂಚಿಸಿದರು.

**ಸೈಕಲ್ ಟ್ರ್ಯಾಕ್ ನಿರ್ಮಿಸಲು ಸೂಚನೆ:**

ಈಜಿಪುರ ಮೇಲ್ಸೇತುವೆಯ ಕೆಳಭಾಗದ ಸರ್ವಿಸ್ ರಸ್ತೆಯಲ್ಲಿರುವ ಪಾದಚಾರಿ ಮಾರ್ಗವು ಕಿರಿದಾಗಿರುವುದನ್ನು ಗಮನಿಸಿದ ಅವರು, ಮೇಲ್ಸೇತುವೆ ಕಾಮಗಾರಿ ಪೂರ್ಣಗೊಂಡ ತಕ್ಷಣ ಪಾದಚಾರಿ ಮಾರ್ಗವನ್ನು ಅಗಲೀಕರಣ ಮಾಡುವಂತೆ ತಿಳಿಸಿದರು. ಪಾದಚಾರಿ ಮಾರ್ಗ ನಿರ್ಮಿಸುವ ಸಂದರ್ಭದಲ್ಲಿ ಸೈಕಲ್ ಟ್ರ್ಯಾಕ್‌ನ್ನು ಕೂಡಾ ನಿರ್ಮಾಣ ಮಾಡಬೇಕು. ಸೈಕಲ್ ಟ್ರ್ಯಾಕ್ ನಲ್ಲಿ ದ್ವಿಚಕ್ರ ವಾಹನಗಳು ಪ್ರವೇಶವಾಗದಂತೆ ಸೂಕ್ತ ಮಾದರಿಯ ಸೈಕಲ್ ಟ್ರ್ಯಾಕ್ ನಿರ್ಮಾಣ ಮಾಡಲು ಬಿಸ್ಮೈಲ್ ಮುಖ್ಯ ಅಭಿಯಂತರರಿಗೆ ಸೂಚನೆ ನೀಡಿದರು. ಮೇಲ್ಸೇತುವೆಯ ಕೆಳಭಾಗದಲ್ಲಿ ಸೂಕ್ತ ಬೆಳಕಿನ ವ್ಯವಸ್ಥೆ ಕಲ್ಪಿಸಲು ಅಗತ್ಯ ದೀಪಗಳನ್ನು ಅಳವಡಿಸುವ ಕುರಿತು ಅಂದಾಜು ಪಟ್ಟಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಜಯನಗರ ವೈಟ್‌ಟಾಪಿಂಗ್ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಿ:**

ಜಯನಗರದಲ್ಲಿ 22ನೇ ಕ್ರಾಸ್‌ನ ನಾಗಾರ್ಜುನದಿಂದ ಕೂಲ್ ಜಾಯಿಂಟ್‌ವರೆಗೆ 690 ಮೀಟರ್ ಉದ್ದದ ರಸ್ತೆಯಲ್ಲಿ ವೈಟ್‌ಟಾಪಿಂಗ್ ಕಾಮಗಾರಿ ಪ್ರಗತಿಯಲ್ಲಿದೆ. ಒಂದು ಭಾಗದಲ್ಲಿ ವೈಟ್‌ಟಾಪಿಂಗ್ ಕಾಮಗಾರಿ ಪೂರ್ಣಗೊಂಡಿದ್ದು, ಪಾದಚಾರಿ ಮಾರ್ಗ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದೆ. ವೈಟ್‌ಟಾಪಿಂಗ್ ಕಾಮಗಾರಿ ಪೂರ್ಣಗೊಂಡ ಭಾಗದಲ್ಲಿ ಕ್ಯೂರಿಂಗ್ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟು, ಮತ್ತೊಂದು ಭಾಗದಲ್ಲಿ ವೈಟ್‌ಟಾಪಿಂಗ್ ಕಾಮಗಾರಿಯನ್ನು ಕೈಗೆತ್ತಿಕೊಂಡು ತ್ವರಿತವಾಗಿ ಪೂರ್ಣಗೊಳಿಸುವಂತೆ ಸೂಚಿಸಿದರು.

ಇದೇ ರಸ್ತೆಯ ಬದಿಯಲ್ಲಿರುವ ಅಂಗಡಿಗಳ ಮುಂಭಾಗ ತ್ಯಾಜ್ಯವನ್ನು ಬಿಸಾಡಿರುವುದನ್ನು ಗಮನಿಸಿದ ಅವರು, ರಸ್ತೆ ಬದಿಯಲ್ಲಿ ತ್ಯಾಜ್ಯ ಹಾಕದಂತೆ ಅಂಗಡಿಗಳ ಮುಂಭಾಗದಲ್ಲಿ ಸೂಕ್ತ ಡಸ್ಟಿಬಿನ್‌ಗಳ ವ್ಯವಸ್ಥೆ ಮಾಡಿಕೊಳ್ಳುವಂತೆ ಸೂಚಿಸಿದರು. ಅಲ್ಲದೆ, ಪಾದಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡಿರುವ ಅಂಗಡಿಗಳಿಗೆ ಎಚ್ಚರಿಕೆ ನೀಡಿ, ನಿಯಮಾನುಸಾರ ದಂಡ ವಿಧಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಈ ವೇಳೆ ದಕ್ಷಿಣ ನಗರ ಪಾಲಿಕೆ ಆಯುಕ್ತರಾದ ಕೆ.ಎನ್. ರಮೇಶ್, ಅಪರ ಆಯುಕ್ತರಾದ ಡಾ. ನವೀನ್ ಕುಮಾರ್ ರಾಜು, ಮುಖ್ಯ ಅಭಿಯಂತರರಾದ ಬಸವರಾಜ್ ಕಬಾಡೆ, ಮಾದೇಶ್ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ನಾಯಕತ್ವಕ್ಕೆ ಮಾದರಿ

1979ರ ಅಗಸ್ಟ್ 10, ಆ ದಿನ ಭಾರತದ ಮೊಟ್ಟ ಮೊದಲ ಸ್ವದೇಶಿ ನಿರ್ಮಿತ ಎಸ್ ಎಲ್ ವಿ ಉಪಗ್ರಹವು ತಮಿಳುನಾಡಿನ ಶ್ರೀಹರಿಕೋಟದಿಂದ ಉಡ್ಡಯನ ಮಾಡಲಿತ್ತು. ನೂರಾರು ಜನ ವಿಜ್ಞಾನಿಗಳು ಪ್ರೊಜೆಕ್ಟ ನಿರ್ದೇಶಕರಾದ ಡಾ. ಎ ಪಿ ಜೆ ಅಬ್ದುಲ್ ಕಲಾಂ ಅವರ ನೇತೃತ್ವದಲ್ಲಿ ಸರಿಸುಮಾರು 6 ವರ್ಷಗಳ ಕಾಲ ಕಾರ್ಯನಿರ್ವಹಿಸಿದ್ದು ಆ ದಿನ ಅವರ ಮಹತ್ವಕಾಂಕ್ಷೆಯ ಸ್ವದೇಶಿ ನಿರ್ಮಿತ ಉಪಗ್ರಹವನ್ನು ಉಡಾಯಿಸಲು ಕ್ಷಣಗಣನೆ ನಡೆದಿತ್ತು.



ಕಂಪ್ಯೂಟರ್ ಪರದೆಯ ಮೇಲೆ ಉಡ್ಡಯನದ ಕೊನೆಯ ಹಂತದ ಎಲ್ಲಾ ತಯಾರಿಗಳು ಸರಿಯಾಗಿದೆ ಎಂದು ತೋರಿಸುತ್ತಿತ್ತು. ಇನ್ನೇನು ಉಡ್ಡಯನದ ಕೌಂಟಡೌನ್ ಆರಂಭವಾಯಿತು . ಕೊನೆಯ 30 ಸೆಕೆಂಡ್ ಗಳು ಇರುವಾಗ ಕಂಪ್ಯೂಟರ್ ಪರದೆಯ ಮೇಲೆ ಕೊಂಚ ಅಸಹಜತೆಯನ್ನು ತೋರಿತು. ತಾಂತ್ರಿಕ ಕಾರಣಗಳಿಂದಾಗಿ ಹಾಗೆ ಆಗಿರಲೂಬಹುದು ಇಲ್ಲವೇ ಅನಿರೀಕ್ಷಿತ ತೊಂದರೆ ಕೂಡ ಆಗಿರಬಹುದು ಮಿಷನ್ ಡೈರೆಕ್ಟರ್ ಆದ ಎಪಿಜೆ ಅಬ್ದುಲ್ ಕಲಾಂ ಅವರು ಒಂದೆರಡು ಕ್ಷಣಗಳಲ್ಲಿ ತೆಗೆದುಕೊಳ್ಳಬಹುದಾದ ತೀರ್ಮಾನದ ಮೇಲೆ ಇಡೀ ಪ್ರಾಜೆಕ್ಟ್ ನ ಕಾರ್ಯಾಚರಣೆ ನಿಂತಿತ್ತು. ತೀವ್ರ ಕಾರ್ಯಾಚರಣೆಯನ್ನು ನಿಲ್ಲಿಸಬೇಕೇ ಅಥವಾ ಇದೊಂದು ಅವಕಾಶವನ್ನು ತಮ್ಮ ವಿಜ್ಞಾನಿಗಳ ಬಳಗಕ್ಕೆ ಕೊಟ್ಟು ನೋಡಬಹುದೇ? ಎಂಬ ಎರಡು ಆಯ್ಕೆಗಳು ಅವರ ಮುಂದೆ ಇತ್ತು.ಒಂದೆರಡು ಕ್ಷಣಗಳಲ್ಲಿ ಅವರು ತಮ್ಮ ವಿಜ್ಞಾನಿಗಳ ಶ್ರಮ ಮತ್ತು ಕಾರ್ಯ ತತ್ಪರತೆಯ ಮೇಲೆ ವಿಶ್ವಾಸವನ್ನು ಹೊಂದಿ ಹಸಿರು ನಿಶಾನೆ ತೋರಿದರು. ಮುಂದಿನ ಕೆಲವೇ ಸೆಕೆಂಡುಗಳಲ್ಲಿ ಶ್ರೀಹರಿಕೋಟದ ಉಡ್ಡಯನ ಕೇಂದ್ರದಿಂದ ಉಪಗ್ರಹ ಹಾರಿತು..... ಆದರೆ ಆಗಸದಲ್ಲಿ ರಾಕೆಟನಂತೆ ಚಿಮ್ಮಿದ ಉಪಗ್ರಹ ಹಾರಿದ ವೇಗದಲ್ಲಿಯೇ ಮರಳಿ ಸಮುದ್ರವನ್ನು ಅಪ್ಪಳಿಸಿ ಸಾಗರದ ತಳ ಸೇರಿತು. ಬಾಹ್ಯಾಕಾಶ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಎಲ್ಲ ವಿಜ್ಞಾನಿಗಳಿಗೂ ಬರಸಿಡಿಲು ಬಡಿದಂತಾಯಿತು. ಅವರ ನಿರಾಶೆ ಹೇಳತೀರದು.

ಭಾರತದಂತಹ ಆಗತಾನೇ ಅಭಿವೃದ್ಧಿ ಹೊಂದುತ್ತಿರುವ ದೇಶದಲ್ಲಿ ನೂರಾರು ಕೋಟಿ ಹಣ ವೆಚ್ಚ ಮಾಡಿ ಉಪಗ್ರಹವನ್ನು ಹಾರಿಸುವುದು ಎಂದರೆ ಬಡವರ ಹೊಟ್ಟೆಯ ಮೇಲೆ ಹೊಡೆದಂತೆ ದೇಶದ ಸಾರ್ವಜನಿಕರ ತೆರಿಗೆ ಹಣವನ್ನು ಪೋಲು ಮಾಡಿದಂತೆ ಎಂದು ಈಗಾಗಲೇ ಸಾಕಷ್ಟು ವಿರೋಧವನ್ನು ಅಂದಿನ ಆಡಳಿತಾರೂಢ ಸರ್ಕಾರ ಎದುರಿಸುತ್ತಿತ್ತು. ಅಂತಹ ಸಮಯದಲ್ಲಿ ಉಪಗ್ರಹದಲ್ಲಿನ ತಾಂತ್ರಿಕ ದೋಷ ಕೊನೆಯ ಕ್ಷಣದಲ್ಲಿ ಎಡವಟ್ಟನ್ನು ಉಂಟು ಮಾಡಿತು. ಮುಂದಿನ ಅರ್ಧ ಗಂಟೆಯಲ್ಲಿ ದೇಶವನ್ನು ಉದ್ದೇಶಿಸಿ ಈ ಉಪಗ್ರಹ ಉಡಾವಣೆಯ ಕುರಿತು ಮಾಹಿತಿಯನ್ನು ವಿಜ್ಞಾನಿಗಳ ತಂಡದ ಯೋಜನಾ ನಿರ್ದೇಶಕರಾದ ಅಬ್ದುಲ್ ಕಲಾಮ್ ಅವರು ನೀಡಬೇಕಿತ್ತು. ಇನ್ನೇನು ಅವರು ಪತ್ರಕರ್ತರಿಂದ ಕಿಕ್ಕಿರಿದ ಸಭಾಂಗಣವನ್ನು ಪ್ರವೇಶಿಸಬೇಕು ಎನ್ನುವಷ್ಟರಲ್ಲಿ ಅವರನ್ನು ತಡೆದ ಇಸ್ರೋದ ಅಂದಿನ ಅಧ್ಯಕ್ಷ ಡಾ. ಕೆ ಸತೀಶ್ ಧವನ್ ಅವರು ತಾವೇ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತೇನೆ ಎಂದು ಹೇಳಿದರು. ನಂತರ ಸಭಾಂಗಣವನ್ನು ಪ್ರವೇಶಿಸಿದ ಅವರು ಪತ್ರಕರ್ತರ ತೀವ್ರ ವಿರೋಧದ ನಡುವೆಯೂ ಇಡೀ ಸಭಾಂಗಣವನ್ನು ತಮ್ಮ ಗಟ್ಟಿಯಾದ ಧ್ವನಿಯಿಂದ ನಿಯಂತ್ರಣಕ್ಕೆ ತಂದು ತಾಂತ್ರಿಕ ಕಾರಣಗಳಿಂದ ಎಸ್ ಎಲ್ ವಿ ತ್ರಿ ಪ್ರಾಯೋಗಿಕ ಉಪಗ್ರಹವು ಉಡ್ಡಯನ ಸಮಯದಲ್ಲಿ ವಿಫಲಗೊಂಡಿದ್ದು ತಮಗೂ ಕೂಡ ನಿರಾಶೆಯಾಗಿದೆ. ಈ ಯೋಜನೆಗೆ ತಮ್ಮ ಬದುಕಿನ ಆರು ವರ್ಷಗಳನ್ನು ಸಲ್ಲಿಸಿರುವ ವಿಜ್ಞಾನಿಗಳಿಗೂ ಬೇಸರ ತಂದಿದೆ. ಈ ವೈಫಲ್ಯದ ಸಂಪೂರ್ಣ ಜವಾಬ್ದಾರಿ ನನ್ನದು..ಈ ವೈಫಲ್ಯವನ್ನು ಮತ್ತೆ ತುಂಬಿ ಕೊಡುವ ನಿಟ್ಟಿನಲ್ಲಿ ಇಸ್ರೋದ ಎಲ್ಲಾ ವಿಜ್ಞಾನಿಗಳು ಮತ್ತೆ ಕಾರ್ಯ ಚಟುವಟಿಕೆಯನ್ನು ಆರಂಭಿಸಿ ಶೀಘ್ರದಲ್ಲಿಯೇ ದೇಶಕ್ಕೆ ಉತ್ತಮ ಭವಿಷ್ಯವನ್ನು ತಂದುಕೊಡುವ ಉಪಗ್ರಹವನ್ನು ಉಡಾಯಿಸಲಿದ್ದಾರೆ ಎಂದು ನುಡಿದರು.

ಜನರ ನಿರಾಶೆಯು ಪತ್ರಕರ್ತರ ದ್ವನಿಗಳಲ್ಲಿ ಗೊಣಗುಟ್ಟುವ ರೀತಿಯಲ್ಲಿ ಹೊರಹೊಮ್ಮಿದರೂ, ಈ ಯೋಜನೆಗೆ ಕಾರ್ಯನಿರ್ವಹಿಸಿದ ವಿಜ್ಞಾನಿಗಳಲ್ಲಿ ಹೊಸ ಭರವಸೆಯನ್ನು ಮೂಡಿಸಿತು. ತಮ್ಮ ಬಾಹ್ಯಾಕಾಶ ಸಂಸ್ಥೆಯ ಅಧ್ಯಕ್ಷರ ವಿಶ್ವಾಸ ಅವರಿಗೆ ಹೊಸ ಹುರುಪನ್ನು. ಚೈತನ್ಯವನ್ನು ನೀಡಿತು. ವಿಫಲಗೊಂಡ ಯೋಜನೆಯಲ್ಲಿದ್ದ ತಾಂತ್ರಿಕ ತೊಂದರೆಗಳೆಲ್ಲವನ್ನು ನಿವಾರಿಸಿ ಅವರು ಶೀಘ್ರವೇ ಮತ್ತೊಂದು ಉಪಗ್ರಹ ವನ್ನು ಕೇವಲ ಹನ್ನೊಂದು ತಿಂಗಳ ಅವಧಿಯಲ್ಲಿ ತಯಾರಿಸಿದರು. ಆ ದಿನ 1980 ಜುಲೈ 18.. ಎಸ್ ಎಲ್ ವಿ ರೋಹಿಣಿ ಉಪಗ್ರಹವು ಉಡಾವಣೆಯಾಗುವ ಆ ಸಮಯದಲ್ಲಿ ಈ ಹಿಂದಿನ ವಿಫಲತೆಯ ಅಳುಕು ಕೊಂಚ ಕಾಡಿದರೂ, ಈ ಬಾರಿ ಉಡ್ಡಯನದಲ್ಲಿ ಯಾವುದೇ ತೊಂದರೆಯಾಗುವುದಿಲ್ಲ ಹಾಗೂ ಉಡ್ಡಯನ ಯಶಸ್ವಿಯಾಗುತ್ತದೆ ಎಂಬ ಭರವಸೆ ಕೂಡ ಇತ್ತು. ಅಂತೆಯೇ ಕೌಂಟ್ ಡೌನ್ ಆರಂಭವಾಗಿ ಉಪಗ್ರಹ ಉಡಾವಣೆಗೊಂಡಿತು ಹಾಗೂ ಮುಂದಿನ ಕೆಲವೇ ಕ್ಷಣಗಳಲ್ಲಿ ಭೂಮಿಯ ಕಕ್ಷೆಯನ್ನು ದಾಟಿ ಆಗಸದತ್ತ ಚಿಮ್ಮಿ ಮುಂದೆ ಸಾಗಿತು.

ಇಡೀ ದೇಶದಲ್ಲಿ ಸಂಭ್ರಮೋತ್ಸಾಹ ಮನೆ ಮಾಡಿತ್ತು.ವಿಜ್ಞಾನಿಗಳ ಸಂಭ್ರಮವಂತೂ ಹೇಳತೀರದು. ಹಲವಾರು ವರ್ಷಗಳ ಕಾಲ ಬಯಸಿ ಮಗುವನ್ನು ಹೆತ್ತ ತಾಯಿಯ ಮುಖದಲ್ಲಿ ಇದ್ದ ತೃಪ್ತಿ ಅವರ ಕಣ್ಣುಗಳಲ್ಲಿ ಕಾಣಬಹುದಿತ್ತು. ಸಂತಸದ ಕಣ್ಣೀರು ಭಾವುಕ ವಾತಾವರಣವನ್ನು ನಿರ್ಮಿಸಿತ್ತು. ಪತ್ರಿಕಾಗೋಷ್ಠಿಯಲ್ಲಿ ದೇಶವನ್ನು ಉದ್ದೇಶಿಸಿ ಮಾತನಾಡುವ ಸಮಯ. ಇದೀಗ ಇಸ್ರೋದ ಅಧ್ಯಕ್ಷ ಸತೀಶ್ ಧವನ ರವರು ಯೋಜನಾ ನಿರ್ದೇಶಕ ಅಬ್ದುಲ್ ಕಲಾಂರನ್ನು ಕರೆದು ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಲು ಹೇಳಿದರು. ಅಬ್ದುಲ್ ಕಲಾಂ ಅದೆಷ್ಟೇ ಕೇಳಿಕೊಂಡರೂ ಒಪ್ಪದೇ ಪತ್ರಕರ್ತರ ಜೊತೆ ಮಾತನಾಡಲು ಅವರನ್ನು ಬಿಟ್ಟು ಅಲ್ಲಿಂದ ಹೊರಟು ಹೋದರು.

ನಿಜವಾದ ನಾಯಕತ್ವ ಎಂದರೆ ಇದೇ ಎಂದು ಈ ಘಟನೆಯನ್ನು ಅನೇಕ ಬಾರಿ ಅಬ್ದುಲ್ ಕಲಾಮ್ ಅವರು ನೆನೆದಿದ್ದರು. ನಿಜವಾದ ನಾಯಕನ ಲಕ್ಷಣವೇ ಅದು ಎಲ್ಲ ಸೋಲನ್ನು ತಮ್ಮ ಮೈ ಮೇಲೆ ಹಾಕಿಕೊಂಡು ಮಾಧ್ಯಮದವರನ್ನು ಎದುರಿಸಿದ ಸತೀಶ್ ಧವನ್ ಮುಂದೆ ಗೆದ್ದಾಗ ತನ್ನ ತಂಡದವರಿಗೆ ಗೆಲುವಿನ ಸಾರಥ್ಯ ವಹಿಸಲು ಹೇಳಿ ಅತ್ಯಂತ ನಮ್ರವಾಗಿ ಸರಿದು ಹೋದರು. ಸತೀಶ್ ಧವನ್ ಓರ್ವ ಅತ್ಯುತ್ತಮ ದೂರ ದೃಷ್ಟಿಯುಳ್ಳ ನಾಯಕ. ನೋಡಿದಿರಾ ಸ್ನೇಹಿತರೆ ನಿಜವಾದ ನಾಯಕ ಎಲ್ಲರನ್ನು ಒಗ್ಗೂಡಿಸಿಕೊಂಡು ಕೆಲಸ ನಿರ್ವಹಿಸುತ್ತಾನೆ. ಕೆಲಸದ ಯಶಸ್ಸಿಗೆ ಎಲ್ಲರನ್ನೂ ಹೊಣೆಯಾಗಿಸುತ್ತಾನೆ. ನಾನು ಮೇಲಧಿಕಾರಿ ನೀವೆಲ್ಲ ನನ್ನ ಕೈ ಕೆಳಗೆ ಕಾರ್ಯನಿರ್ವಹಿಸುವವರು ಎಂದು ದರ್ಪ ಮಾಡುವುದಿಲ್ಲ. ಎಲ್ಲರನ್ನೂ ಸಮಾನ ಗೌರವ ಹಾಗೂ ವಿಶ್ವಾಸದಿಂದ ಕಾಣುತ್ತಾನೆ. ಪ್ರಸ್ತುತ ನಮ್ಮ ದೇಶಕ್ಕೆ ಅಂತಹ ನೂರಾರು ಸಾವಿರಾರು ಸಂಖ್ಯೆಯ ನಾಯಕರ ಅವಶ್ಯಕತೆ ಇದೆ. ನಮ್ಮ ಇಂದಿನ ಜಗತ್ತಿಗೆ ಅತ್ಯವಶ್ಯಕವಾದ ಅಂತಹ ನಾಯಕರು ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಹುಟ್ಟಿ ಬರಲಿ ಎಂದು ಆಶಿಸುವ



ವೀಣಾ ಹೇಮಂತ್ ಗೌಡ ಪಾಟೀಲ್

# ಚೆಂಡು ಹೂವು : ಮಣ್ಣಿನ ಮಡಿಲಲ್ಲಿ ಅರಳುವ ಸುವರ್ಣ ಸೌಂದರ್ಯ

ಬೆಳಗಿನ ಸೂರ್ಯನ ಕಿರಣಗಳು ಭೂಮಿಯನ್ನು ಮುದ್ದಾಡುತ್ತಿದ್ದಂತೆ ಹಸಿರು ಹೊಲಗಳ ನಡುವೆ ಕಂಗೊಳಿಸುವ ಹಳದಿ?ಕಿತ್ತಳೆ ಬಣ್ಣದ ಚೆಂಡು ಹೂಗಳು ನೋಡುಗರ ಕಣ್ಣಿಗೆ ಹಬ್ಬವನ್ನುಂಟು ಮಾಡುತ್ತವೆ. ಸರಳವಾದ ರೂಪ, ಮನಮೋಹಕ ಬಣ್ಣ ಮತ್ತು ವಿಶಿಷ್ಟ ಪರಿಮಳದಿಂದ ಮನೆ, ದೇವಾಲಯ, ಹಬ್ಬ?ಹರಿದಿನ ಹಾಗೂ ಶುಭ ಸಮಾರಂಭಗಳ ಅವಿಭಾಜ್ಯ ಅಂಗವಾಗಿರುವ ಚೆಂಡು ಹೂವು ಕೇವಲ ಅಲಂಕಾರದ ಹೂವಲ್ಲ; ಅದು ರೈತರ ಬದುಕಿಗೆ ಆರ್ಥಿಕ ಬಲ ನೀಡುವ ಪ್ರಮುಖ ವಾಣಿಜ್ಯ ಬೆಳೆಯೂ ಹೌದು.



**ಬಣ್ಣದಲ್ಲೇ ಸೌಂದರ್ಯ, ಬಳಕೆಯಲ್ಲಿ ವೈವಿಧ್ಯ**

ಚೆಂಡು ಹೂವು ಸಾಮಾನ್ಯವಾಗಿ ಹಳದಿ, ಕಿತ್ತಳೆ, ಗಾಢ ಕಿತ್ತಳೆ ಸೇರಿದಂತೆ ವಿವಿಧ ಬಣ್ಣಗಳಲ್ಲಿ ಅರಳುತ್ತದೆ. ಇದರ ಗುಂಡಗಿನ ಆಕೃತಿ ಮತ್ತು ದಟ್ಟವಾದ ದಳಗಳು ಹೂವಿಗೆ ವಿಶಿಷ್ಟ ಆಕರ್ಷಣೆಯನ್ನು ನೀಡುತ್ತವೆ. ಹಬ್ಬಗಳ ಸಂದರ್ಭದಲ್ಲಿ ಮನೆ ಬಾಗಿಲು, ದೇವಾಲಯ, ಮಂಟಪ ಹಾಗೂ ವೇದಿಕೆಗಳ ಅಲಂಕಾರಕ್ಕೆ ಚೆಂಡು ಹೂವಿನ ಹಾರಗಳು ವಿಶೇಷ ಮೆರುಗು ನೀಡುತ್ತವೆ. ದಸರಾ, ದೀಪಾವಳಿ, ಗಣೇಶ ಚತುರ್ಥಿ, ಮದುವೆ, ಗೃಹಪ್ರವೇಶ ಸೇರಿದಂತೆ ಅನೇಕ ಶುಭ ಸಮಾರಂಭಗಳಲ್ಲಿ ಚೆಂಡು ಹೂವಿಗೆ ವಿಶೇಷ ಸ್ಥಾನವಿದೆ. ದೇವರ ಪೂಜೆಯಲ್ಲಿ ಹೂವಿನ ಬಳಕೆ ಹೆಚ್ಚಿರುವುದರಿಂದ ವರ್ಷವಿಡೀ ಇದಕ್ಕೆ ಮಾರುಕಟ್ಟೆಯಲ್ಲಿ ಬೇಡಿಕೆ ಕಂಡುಬರುತ್ತದೆ.

**ರೈತರ ಪಾಲಿನ ಆದಾಯದ ಬೆಳೆ**

ಚೆಂಡು ಹೂವು ಕಡಿಮೆ ಅವಧಿಯಲ್ಲಿ ಬೆಳೆಯಬಹುದಾದ ಕಾರಣ ಅನೇಕ ರೈತರಿಗೆ ಆಕರ್ಷಕ ವಾಣಿಜ್ಯ ಬೆಳೆಯಾಗಿದೆ. ಸೂಕ್ತ ಮಣ್ಣು, ನೀರು, ಗೊಬ್ಬರ ಮತ್ತು ಕೀಟನಿಯಂತ್ರಣದೊಂದಿಗೆ ಉತ್ತಮ ನಿರ್ವಹಣೆ ಮಾಡಿದರೆ ರೈತರು ಉತ್ತಮ ಇಳುವರಿ ಪಡೆಯಬಹುದು.

**ಹಬ್ಬಗಳ ಸಮಯದಲ್ಲಿ ಹೂವಿಗೆ ಬೇಡಿಕೆ**

ಹೆಚ್ಚಾಗುವುದರಿಂದ ಮಾರುಕಟ್ಟೆಯಲ್ಲಿ ಬೆಲೆ ಏರಿಕೆಯಾಗುವ ಸಾಧ್ಯತೆಯೂ ಇರುತ್ತದೆ. ಹೀಗಾಗಿ ಮಾರುಕಟ್ಟೆಯ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಬೆಳೆ ಬೆಳೆಯುವುದು ರೈತರಿಗೆ ಹೆಚ್ಚಿನ ಆದಾಯದ ಅವಕಾಶವನ್ನು ನೀಡಬಹುದು. ಆದರೆ ಹೂವಿನ ಬೆಲೆ ದಿನದಿಂದ ದಿನಕ್ಕೆ ಬದಲಾಗುವ ಸಾಧ್ಯತೆ ಇರುವುದರಿಂದ ಬೆಳೆಗಾರರು ಮಾರುಕಟ್ಟೆ ಮಾಹಿತಿ, ಸಾಗಣೆ ವ್ಯವಸ್ಥೆ ಮತ್ತು ಮಾರಾಟದ ಅವಕಾಶಗಳನ್ನು ಮೊದಲೇ ಅಂದಾಜಿಸುವುದು ಅಗತ್ಯ.



**ಪ್ರಕೃತಿಯೊಂದಿಗೆ ಚೆಂಡು ಹೂವಿನ ನಂಟು**

ಹೂವಿನ ತೋಟಗಳು ಕೇವಲ ಕಣ್ಣಿಗೆ ಹಬ್ಬ ನೀಡುವುದಷ್ಟೇ ಅಲ್ಲದೆ ಪರಿಸರ ವ್ಯವಸ್ಥೆಯಲ್ಲಿಯೂ ಪಾತ್ರವಹಿಸುತ್ತವೆ. ಹೂಗಳಿಗೆ ಭೇಟಿ ನೀಡುವ ಜೇನುನೊಣಗಳು ಮತ್ತು ಇತರ ಪರಾಗಸ್ಪರ್ಶಕ ಕೀಟಗಳು ಕೃಷಿ ಪರಿಸರದ ಜೀವಂತಿಕೆಯನ್ನು ಹೆಚ್ಚಿಸುತ್ತವೆ. ಚೆಂಡು ಹೂವಿನ ಕೆಲವು ಪ್ರಭೇದಗಳನ್ನು ತೋಟಗಾರಿಕೆಯಲ್ಲಿ ಇತರ ಬೆಳೆಗಳೊಂದಿಗೆ ಬೆಳೆಸುವುದರಿಂದ ಕೀಟ ನಿರ್ವಹಣೆಗೆ ಸಹಾಯಕವಾಗಬಹುದು. ವಿಶೇಷವಾಗಿ ಹೂವಿನ ಗಿಡಗಳನ್ನು ಕೃಷಿ ಪದ್ಧತಿಯಲ್ಲಿ ಸೂಕ್ತವಾಗಿ ಬಳಸುವ ಕುರಿತು ರೈತರು ಕೃಷಿ ತಜ್ಞರ ಸಲಹೆ ಪಡೆಯುವುದು ಉತ್ತಮ.

**ಸಂಸ್ಕೃತಿ ಮತ್ತು ಸಂಪ್ರದಾಯದ ಪ್ರತೀಕ**

ನಮ್ಮ ಸಂಸ್ಕೃತಿಯಲ್ಲಿ ಹೂವು ಎಂದರೆ ಪಾವಿತ್ರ್ಯ, ಸಂತೋಷ ಮತ್ತು ಶುಭದ ಸಂಕೇತ. ಅದರಲ್ಲೂ ಚೆಂಡು ಹೂವು ಗ್ರಾಮೀಣ ಬದುಕಿನೊಂದಿಗೆ ಆಳವಾದ ಸಂಬಂಧ ಹೊಂದಿದೆ. ಹಳ್ಳಿಗಳಲ್ಲಿ ಹಬ್ಬದ ದಿನಗಳಲ್ಲಿ ಮನೆಯ ಬಾಗಿಲಿಗೆ ಚೆಂಡು ಹೂವಿನ ತೋರಣ ಕಟ್ಟುವುದು ಇಂದಿಗೂ ಸಾಮಾನ್ಯ ದೃಶ್ಯ. ದೇವಾಲಯಗಳ ಪೂಜೆ, ಜಾತ್ರೆ, ಉತ್ಸವ, ಮದುವೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಚೆಂಡು ಹೂವಿನ ಹಾರಗಳು ಪ್ರಮುಖ ಸ್ಥಾನ ಪಡೆದಿವೆ. ಹೀಗಾಗಿ ಈ ಹೂವು ನಮ್ಮ ಸಂಪ್ರದಾಯದ ಸೌಂದರ್ಯವನ್ನು ಮುಂದಿನ ಪೀಳಿಗೆಗೂ ಕೊಂಡೊಯ್ಯುವ ಸಾಂಸ್ಕೃತಿಕ ಸೇತುವೆಯಾಗಿದೆ.

**ಕಣ್ಣಿಗೆ ಹಬ್ಬ, ಮನಸ್ಸಿಗೆ ಮುದ**

ಚೆಂಡು ಹೂವಿನ ತೋಟದ ಮಧ್ಯೆ ನಿಂತಾಗ ಕಾಣಿಸುವ ಹಳದಿ?ಕಿತ್ತಳೆ ಬಣ್ಣಗಳ ಅಲೆ ಮನಸ್ಸಿಗೆ ವಿಶಿಷ್ಟ ಸಂತೋಷವನ್ನು ನೀಡುತ್ತದೆ. ಬೆಳಗಿನ ಹೊತ್ತಿನಲ್ಲಿ ಮಂಜಿನ ಹನಿಗಳೊಂದಿಗೆ ಅರಳಿರುವ ಚೆಂಡು ಹೂವು ಪ್ರಕೃತಿಯೇ ಚಿತ್ರಿಸಿದ ಸುಂದರ ಕಲಾಕೃತಿಯಂತೆ ಕಾಣುತ್ತದೆ. ನಗರ ಜೀವನದ ಒತ್ತಡದಿಂದ ದೂರವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಅರಳಿರುವ ಇಂತಹ ಹೂವಿನ ಹೊಲಗಳು ನಮ್ಮ ನೆಲದ ಸೌಂದರ್ಯವನ್ನು ನೆನಪಿಸುತ್ತವೆ. ರೈತನ ಪರಿಶ್ರಮ, ಮಣ್ಣಿನ ಫಲವತ್ತತೆ ಮತ್ತು ಪ್ರಕೃತಿಯ ಕೊಡುಗೆ?ಈ ಮೂರೂ ಸೇರಿ ಚೆಂಡು ಹೂವಿನ ಸೌಂದರ್ಯವನ್ನು ಮತ್ತಷ್ಟು ಅರ್ಥಪೂರ್ಣವಾಗಿಸುತ್ತವೆ.

**ರೈತನ ಬೆವರಿನಿಂದ ಅರಳುವ ಹೂವು**

ನಾವು ಮಾರುಕಟ್ಟೆಯಲ್ಲಿ ಒಂದು ಚೆಂಡು ಹೂವನ್ನು ನೋಡಿದಾಗ ಅದರ ಹಿಂದೆ ಇರುವ ರೈತನ ಪರಿಶ್ರಮವನ್ನು ಮರೆಯಬಾರದು. ಬೀಜ ಬಿತ್ತುವುದರಿಂದ ಹಿಡಿದು ಸಸಿ ಬೆಳೆಸುವುದು, ನೀರುಣಿಸುವುದು, ಕಳೆ ತೆಗೆಯುವುದು, ಕೀಟ?ರೋಗಗಳಿಂದ ರಕ್ಷಿಸುವುದು ಹಾಗೂ ಕೊನೆಗೆ ಹೂಗಳನ್ನು ಕಿತ್ತು ಮಾರುಕಟ್ಟೆಗೆ ತಲುಪಿಸುವವರೆಗೆ ರೈತನ ಶ್ರಮ ನಿರಂತರ. ಹೀಗಾಗಿ ಚೆಂಡು ಹೂವು ಕೇವಲ ಒಂದು ಹೂವಲ್ಲ. ಅದು ರೈತನ ಶ್ರಮದ ಪ್ರತೀಕ, ಪ್ರಕೃತಿಯ ಸೌಂದರ್ಯದ ಪ್ರತಿಬಿಂಬ ಮತ್ತು ನಮ್ಮ ಸಂಸ್ಕೃತಿಯ ಅವಿಭಾಜ್ಯ ಭಾಗ.

**ಕೊನೆಯ ಮಾತು**

ಹಳದಿ?ಕಿತ್ತಳೆ ಬಣ್ಣದಲ್ಲಿ ಅರಳುವ ಪ್ರತಿಯೊಂದು ಚೆಂಡು ಹೂವಿನ ಹಿಂದೆ ಒಂದು ಸುಂದರ ಕಥೆಯಿದೆ?ಮಣ್ಣಿನ ಕಥೆ, ಮಳೆಯ ಕಥೆ, ರೈತನ ಬೆವರಿನ ಕಥೆ ಮತ್ತು ಬದುಕಿನ ನಿರೀಕ್ಷೆಯ ಕಥೆ. “ಮಣ್ಣಿನಲ್ಲಿ ಅರಳಿದ ಹೂವು, ರೈತನ ಬದುಕಿನಲ್ಲಿ ಅರಳುವ ಭರವಸೆ.” ಚೆಂಡು ಹೂವು ಅರಳುವ ಪ್ರತಿಯೊಂದು ಹೊಲವೂ ನಮ್ಮ ಕೃಷಿಯ ಸೌಂದರ್ಯವನ್ನು ಸಾರುತ್ತದೆ. ಅದನ್ನು ಬೆಳೆಸುವ ರೈತನ ಪರಿಶ್ರಮಕ್ಕೆ ಗೌರವ ನೀಡುವುದು, ಸ್ಥಳೀಯ ಹೂ ಬೆಳೆಗಾರರನ್ನು ಪ್ರೋತ್ಸಾಹಿಸುವುದು ಮತ್ತು ನಮ್ಮ ನೈಸರ್ಗಿಕ ಸೌಂದರ್ಯವನ್ನು ಉಳಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ.

ವಿನಾಯಕ ಬಿ. ತಿಪ್ಪಣ್ಣನವರ

## ಬರಪೀಡಿತ ಪ್ರದೇಶಗಳಿಗೆ ಡಿಸಿಎಂ ಪರಮೇಶ್ವರ್ ಭೇಟಿ



**ತುಮಕೂರು:** ತಾಲ್ಲೂಕಿನ ನಾಗನಹಳ್ಳಿ ಹಾಗೂ ಮಂಡನಪಾಳ್ಯ ಗ್ರಾಮಗಳ ಬರಪೀಡಿತ ಪ್ರದೇಶಗಳಿಗೆ ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ.ಪರಮೇಶ್ವರ ಭೇಟಿ ನೀಡಿ ಅಡಿಕೆ ತೋಟಗಳಲ್ಲಿನ ಬೆಳೆ ಪರಿಸ್ಥಿತಿಯನ್ನು ಪರಿಶೀಲಿಸಿದರು.

ಮಳೆ ಕೊರತೆಯಿಂದ ತಾಲ್ಲೂಕಿನ ಹಲವು ಭಾಗಗಳಲ್ಲಿ ಕೃಷಿ ಚಟುವಟಿಕೆಗಳು ಸಂಕಷ್ಟಕ್ಕೆ ಸಿಲುಕಿದ್ದು, ಅಡಿಕೆ ಸೇರಿದಂತೆ ತೋಟಗಾ-ರಿಕಾ ಬೆಳೆಗಳಿಗೆ ನೀರಿನ ಅಭಾವ ಎದುರಾಗಿದೆ. ಈ ಹಿನ್ನೆಲೆಯಲ್ಲಿ ರೈತರ ಜಮೀನುಗಳಿಗೆ ತೆರಳಿದ ಸಚಿವರು, ತೋಟಗಳಲ್ಲಿನ ಬೆಳೆ ಸ್ಥಿತಿ, ನೀರಿನ ಲಭ್ಯತೆ ಹಾಗೂ ಮಳೆ ಕೊರತೆಯಿಂದ ಉಂಟಾಗಿರುವ ಸಮಸ್ಯೆಗಳ ಕುರಿತು ರೈತರಿಂದ ಮಾಹಿತಿ ಪಡೆದರು. ಕೊಳವೆಬಾವಿಗಳ ಸ್ಥಿತಿ, ಅಂತರ್ಜಲ ಮಟ್ಟ ಹಾಗೂ ತೋಟಗಳಿಗೆ ನೀರು ಪೂರೈಸುವ ಮೂಲಗಳ ಬಗ್ಗೆಯೂ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಮಳೆ ಕೈಕೊಟ್ಟಿರುವುದರಿಂದ ಅಡಿಕೆ ತೋಟಗಳನ್ನು ಉಳಿಸಿಕೊಳ್ಳುವುದು ಕಷ್ಟವಾಗಿದ್ದು, ತೋಟಗಳಲ್ಲಿ ತೇವಾಂಶ ಕಡಿಮೆಯಾಗಿ ನೀರಿನ ಮೂಲಗಳು ಬತ್ತುತ್ತಿವೆ ಎಂದು ರೈತರು ಸಚಿವರ ಗಮನಕ್ಕೆ ತಂದರು. ರೈತರ ಅಹವಾಲು ಆಲಿಸಿದ ಡಾ.ಜಿ.ಪರಮೇಶ್ವರ, ಬರ ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ರೈತರಿಗೆ ಅಗತ್ಯ ನೆರವು ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಬರಪೀಡಿತ ಪ್ರದೇಶಗಳಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಅಗತ್ಯ ನೀರು ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾ-ರಿಗಳಿಗೆ ಸೂಚಿಸಿದರು. ಅಡಿಕೆ ಸೇರಿದಂತೆ ತೋಟಗಾರಿಕಾ ಬೆಳೆಗಳ ಮೇಲೆ ಬರದಿಂದ ಉಂಟಾಗಿರುವ ಹಾನಿಯ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸಿ, ಸರ್ಕಾರದ ನಿಯಮಾನುಸಾರ ರೈತರಿಗೆ ದೊರೆಯಬೇಕಾದ ಪರಿಹಾರ ಹಾಗೂ ಅಗತ್ಯ ನೆರವು ತಲುಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.ಸ್ಥಳೀಯ ಜನಪ್ರತಿನಿಧಿಗಳು, ಕಂದಾಯ ಮತ್ತು ಕೃಷಿ ಇಲಾಖೆಯ ಅಧಿಕಾರಿಗಳು, ರೈತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಜಿಬಿಎಯಲ್ಲಿ ನಡೆದಿದೆ ಕೋಟಿ ಕೋಟಿ ಲೂಟಿ




**ಬೆಂಗಳೂರು:** ಜಿಬಿಎಯಲ್ಲಿ ಇಬ್ಬರು ನೌಕರರು ತುರ್ತು ವೆಚ್ಚದ ಹೆಸ-ರಿನಲ್ಲಿ ಕೇವಲ ಆರು ತಿಂಗಳಿನಲ್ಲಿ ಒಂದೇ ಕಚೇರಿಯ ಖರ್ಚಿಗೆಂದು 2.76 ಕೋಟಿ ರೂ. ಪಡೆದು ವಂಚಿಸಿರುವ ಘಟನೆಯನ್ನು ಬಿಜೆಪಿ ಮುಖಂಡ ಎನ್.ಆರ್.ರಮೇಶ್ ಬಹಿರಂಗಗೊಳಿಸಿದ್ದಾರೆ.

ಕಳೆದ 11 ತಿಂಗಳಿನಿಂದ ಅಸ್ತಿತ್ವದಲ್ಲೇ ಇಲ್ಲದ ಕಾರ್ಯಪಾಲಕ ಅಭಿಯಂತರರು (ಯೋಜನೆ) ಪಶ್ಚಿಮ ಎಂಬ ಹುದ್ದೆ ಈಗಾಗಲೇ ರದ್ದುಗೊಂಡಿದೆ. ಹಾಗಿದ್ದರೂ ಸಹ, ದಿನಾಂಕ 29/01/2026 ರಿಂದ 29/07/2026 ರವರೆಗಿನ 6 ತಿಂಗಳ ಅವಧಿಯಲ್ಲಿ ಕಾರ್ಯಪಾಲಕ ಅಭಿಯಂತರರು (ಯೋಜನೆ) ಪಶ್ಚಿಮ ಇವರ ಕಛೇರಿಗೆ ಸಂಬಂಧಿಸಿದಂತೆ ಇತರೆ ಸಾಮಾನ್ಯ ಅಥವಾ ತುರ್ತು ವೆಚ್ಚಗಳು ಹೆಸರಿನಲ್ಲಿ 2,61,63,634/- (ಎರಡು ಕೋಟಿ ಅರವತ್ತೊಂದು ಲಕ್ಷದ ಅರವತ್ತ ಮೂರು ಸಾವಿರದ ಆರು ನೂರಾ ಮೂವತ್ತ ನಾಲ್ಕು) ಗಳಷ್ಟು ಬೃಹತ್ ಪ್ರಮಾಣದ ಹಣವನ್ನು ವೆಚ್ಚ ಮಾಡಲಾಗಿದೆ ಎಂಬ ನಕಲಿ ದಾಖಲೆಗಳನ್ನು ಸೃಷ್ಟಿಸಿ, ಅಷ್ಟೂ ಹಣವನ್ನು ನಕಲಿ ಸಂಸ್ಥೆ ಹೆಸರಿಗೆ ಬಿಡುಗಡೆ ಮಾಡಲಾಗಿದೆ ಎಂದು ರಮೇಶ್ ಅವರು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಹಾಗೂ ಪಶ್ಚಿಮ ವಲಯ ಆಯುಕ್ತ ಕೆ.ವಿ.ರಾಜೇಂದ್ರ ಅವರಿಗೆ ದೂರು ನೀಡಿದ್ದಾರೆ. ಈ ಹಿಂದೆ ಇದೇ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಮುನಿಯಪ್ಪ ಅವರು ನಿವೃತ್ತಿ ಹೊಂದಿದ್ದಾರೆ. ಅದೇ ಬೆಂಗಳೂರು ಪಶ್ಚಿಮ ನಗರ ಪಾಲಿಕೆಯ ಉಪ ಹಣಕಾಸು ನಿಯಂತ್ರಕರ ಕಛೇರಿಯಲ್ಲಿ ಪ್ರಥಮ ದರ್ಜೆ ಸಹಾಯಕ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ರವಿಕುಮಾರ್ ಎಂಬ ಮಹಾ ವಂಚಕ ತನ್ನ ಸೋದರ ಸಂಬಂಧಿಯ ಹೆಸರಿನಲ್ಲಿ ನಕಲಿ ಸಂಸ್ಥೆಗೆ ಹಣ ಬಿಡುಗಡೆ ಮಾಡಿಸಿಕೊಂಡಿದ್ದಾರೆ. ಅಲ್ಲದೇ ಇದೇ ರವಿಕುಮಾರ್ ಬೇನಾಮಿ ಮಾಲೀಕತ್ವದ ಸಂಸ್ಥೆಗೆ ಬೆಂಗಳೂರು ಪಶ್ಚಿಮ ನಗರ ಪಾಲಿಕೆಯ ಸಹಾಯಕ ಹಣಕಾಸು ನಿಯಂತ್ರಕರ ಕಛೇರಿಯ ಸಾಮಾನ್ಯ ವೆಚ್ಚಗಳು ಮತ್ತು ಗಣಕಯಂತ್ರಗಳ ದುರಸ್ತಿ ವೆಚ್ಚಗಳು ಎಂಬ ಹೆಸರಿನಲ್ಲಿ 17,28,654 ಹಣ ವೆಚ್ಚವಾಗಿದೆ ಎಂದು ದಾಖಲೆ ಸೃಷ್ಟಿಸಿ ಹಣ ಬಿಡುಗಡೆ ಮಾಡಲಾಗಿದೆ. ಇದೆ ರವಿಕುಮಾರ್ ವಿರುದ್ಧ ಈಗಾಗಲೇ ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಶಾಂತಿನಗರ ವಿಭಾಗದ ಕಾರ್ಯಪಾಲಕ ಅಭಿಯಂತರರ ಕಛೇರಿಯಿಂದ ತನ್ನ ವಂಚಕ ಸಂಸ್ಥೆಗೆ ಸುಮಾರು ಒಂಬತ್ತು ಕೋಟಿ ರೂಪಾಯಿಗಳಷ್ಟು ಬೃಹತ್ ಮೊತ್ತವನ್ನು ಬಿಡುಗಡೆ ಮಾಡಿರುವ ಸಂಬಂಧ ಕಳೆದ ವಾರವಷ್ಟೇ ಲೋಕಾಯುಕ್ತದಲ್ಲಿ ದೂರು ದಾಖಲಿಸಲಾಗಿರುತ್ತದೆ. ಈಗ ಅಂಥದ್ದೇ ಬೃಹತ್ ವಂಚನೆಯ ಹಗರಣ ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲೂ ಅಂತದ್ದೇ ವಂಚನೆ ಮಾಡಿರುವುದನ್ನು ರಮೇಶ್ ಪತ್ತೆ ಹಚ್ಚಿದ್ದಾರೆ. ಮುನಿಯಪ್ಪ ಮತ್ತು ರವಿಕುಮಾರ್ ಅವರು ಸೇರಿಕೊಂಡು ಮಾಡಿರುವ ಕೋಟಿ ಕೋಟಿ ವಂಚನೆ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದರ ಜೊತೆಗೆ ವಂಚನೆಯಾಗಿರುವ ಹಣವನ್ನು ಅವರಿಂದಲೇ ವಸೂಲಿ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ರಮೇಶ್ ಆಗ್ರಹಿಸಿದ್ದಾರೆ.

**ಜನಶ್ರೀ ಟೈಮ್ಸ್**
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಕೆಲವು ಸಚಿವರ ಖಾತೆ ಅದಲು-ಬದಲು



**ಬೆಂಗಳೂರು:** ಹಾಲಿ ಸಚಿವರ ಪೈಕಿ ಕೆಲವರ ಖಾತೆಗಳನ್ನು ಅದಲು-ಬದಲು ಮಾಡಿರುವ ಕಾಂಗ್ರೆಸ್ ಹೈಕಮಾಂಡ್ ಹಿರಿಯ ಸಚಿವ ಕೆ.ಎಚ್. ಮುನಿಯಪ್ಪ ಅವರಿಗೆ ಸಮಾಜ ಕಲ್ಯಾಣ ಜವಾಬ್ದಾರಿ ವಹಿಸಿದೆ.ಹಿರಿಯ ಸಚಿವ ಯು.ಟಿ.ಖಾದರ್ ಅವರ ಖಾತೆಯನ್ನೂ ಬದಲಾವಣೆ ಮಾಡಿದೆ.

ಹಿಂದೆ ಸಿದ್ದರಾಮಯ್ಯಅವರ ಸರ್ಕಾರದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಜವಾಬ್ದಾರಿ ನಿರ್ವಹಿಸಿದ್ದ ಮಧುಬಂಗಾರಪ್ಪ ಅವರಿಗೆ ಅದೇ ಜವಾಬ್ದಾರಿ ನೀಡಲಾಗಿದೆ. ಚೆಲುವರಾಯ ಸ್ವಾಮಿ ಅವ-ರಿಗೆ-ಕೃಷಿ, ಸಂತೋಷ್‌ಲಾಡ್ ಅವರಿಗೆ-ಕಾರ್ಮಿಕ, ಜಮೀರ್ ಅಹಮದ್ ಖಾನ್ ಅವರಿಗೆ- ವಸತಿ, ಎಸ್.ಎಸ್.ಮಲ್ಲಿಕಾರ್ಜುನ ಅವರಿಗೆ-ಗಣಿ, ಭೂ ವಿಜ್ಞಾನ ಜವಾಬ್ದಾರಿಗಳನ್ನು ಮುಂದುವರಿಸಲಾಗಿದೆ. ಕೆ.ಎಚ್.ಮುನಿಯಪ್ಪ ಅವರ ಬಳಿಯಿದ್ದ ಆಹಾರ ಮತ್ತು ನಾಗರಿಕ ಪೂರೈಕೆಯನ್ನು ರಿಜ್ವಾನ್ ಅರ್ಷದ್‌ಗೆ ನೀಡಲಾಗಿದೆ. ರಾಮಲಿಂಗಾ ರೆಡ್ಡಿಯವರನ್ನು ಜಲ ಸಂಪನೂಲ ಖಾತೆಯಲ್ಲೇ ಮುಂದುವರಿಸಲಾಗಿದೆ. ಆರ್ಥಿಕ ಇಲಾಖೆಯ ಮೇಲೆ ಕಣ್ಣಿಟ್ಟಿದ್ದ ಬಸವರಾಜ ರಾಯರೆಡ್ಡಿ ಅವರಿಗೆ ಉನ್ನತ ಶಿಕ್ಷಣ ಜವಾಬ್ದಾರಿ ವಹಿಸಲಾಗಿದೆ.

ವಿಧಾನಸಭಾ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿ ಸಂಪುಟ ಸೇರಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜವಾಬ್ದಾರಿ ನಿರ್ವಹಿಸುತ್ತಿದ್ದ ಯು.ಟಿ.ಖಾದರ್ ಅವರಿಗೆ ಅಲ್ಪಸಂಖ್ಯಾತರ ಅಭಿವೃದ್ಧಿ ಮತ್ತು ಹಜ್ ಮತ್ತು ವಕ್ಫ್ ಖಾತೆಗಳನ್ನು ನೀಡಲಾಗಿದೆ. ಆರೋಗ್ಯ ಸಚಿವರಾದ ಬಳಿಕ ಯು.ಟಿ.ಖಾದರ್ ಫೈವ್ ಸ್ಟಾರ್ ಹೋಟೆಲ್ ಗಳ ಮೇಲೆ ಮುಗಿ ಬಿದ್ದಿದ್ದರು. ಈ ಲಾಬಿ ಖಾತೆ ಬದಲಾವಣೆ ಮಾಡುವಂತೆ ಮಾಡಿದೆ ಎಂಬ ಆರೋಪಗಳಿವೆ. ಕೆ.ಎಸ್.ಬಸಂತಪ್ಪ ಅವರಿಗೆ-ಮೀನುಗಾರಿಕೆ, ಬಂದರು, ಲಕ್ಷ್ಮಣ ಸವದಿ ಅವರಿಗೆ-ಸಹಕಾರ, ಅಜಯ್ ಸಿಂಗ್ ಅವರಿಗೆ- ಅರಣ್ಯ, ಪರಿಸರ ಜೀವಶಾಸ್ತ್ರ, ಬಾಲಕೃಷ್ಣ ಅವರಿಗೆ-ಸಣ್ಣ ನೀರಾವರಿ, ಉಳಿದಂತೆ ಬಿ.ನಾಗೇಂದ್ರ ಅವರಿಗೆ-ಪೌರಾಡಳಿತ, ಟಿ.ರಘುಮೂರ್ತಿಯವರಿಗೆ-ಪರಿಶಿಷ್ಟ ಪಂಗಡಗಳ ಅಭಿವೃದ್ಧಿ, ಪುಟ್ಟರಂಗ ಶೆಟ್ಟಿ ಅವರಿಗೆ-ಹಿಂದುಳಿದ ವರ್ಗಗಳ ಕಲ್ಯಾಣ-ಪಶುಸಂಗೋಪನೆ, ಶಿವರಾಜ್ ತಂಗಡಗಿ ಅವರಿಗೆ-ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಜಯಾನಂದ ಕಾಶಪ್ಪನವರ್ ಅವರಿಗೆ-ಜವಳಿ, ಕೃಷಿ ಮಾರುಕಟ್ಟೆ, ಕೆ. ಎಂ.ಶಿವಲಿಂಗೇಗೌಡ ಅವರಿಗೆ-ತೋಟಗಾರಿಕೆ, ರೇಷ್ಮೆ, ಪಿ.ಎಂ.ನರೇಂದ್ರಸ್ವಾಮಿಯವರಿಗೆ-ಅಬಕಾರಿ, ರುದ್ರಪ್ಪ ಲಮಾಣಿಯವರಿಗೆ-ಯೋಜನೆ ಮತ್ತು ಸಾಂಖ್ಯಿಕ ಜವಾಬ್ದಾರಿ ನೀಡುವ ಸಾಧ್ಯತೆ ಇದ್ದು, ಇನ್ನೂ ಅಧಿಕೃತವಾಗಿ ಖಚಿತ ಪಟ್ಟಿಲ್ಲ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಆರ್ಥಿಕ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸೇರಿದಂತೆ ಉಳಿದ ಎಲ್ಲಾ ಖಾತೆಗಳನ್ನು ತಮ ಬಳಿ ಉಳಿಸಿಕೊಂಡಿದ್ದಾರೆ.

ಈ ಮೊದಲು ಸಂಪುಟ ಸೇರಿದ್ದ 13 ಸಚಿವರ ಪೈಕಿ ಮುನಿಯಪ್ಪ ಅವರನ್ನು ಹೊರತು ಪಡಿಸಿದರೆ ಉಳಿದ ಎಲ್ಲರ ಖಾತೆಗಳು ಯಥ-ಾವತ್ ಮುಂದುವರೆದಿವೆ. ಹೊಸದಾಗಿ ಸಚಿವ ಸಂಪುಟ ಸೇರಿದ 19 ಮಂದಿ ಪೈಕಿ 13 ಜನ-ರಿಗೆ ಖಾತೆ ಹಂಚಿಕೆ ಮಾಡಿ ಹೈಕಮಾಂಡ್ ಪಟ್ಟಿ ರವಾನಿಸಿದೆ. ಇದೇ ಮೊದಲ ಬಾರಿಗೆ ಕಂತಿನ ರೂಪದಲ್ಲಿ ಖಾತೆಗಳ ಹಂಚಿಕೆಯನ್ನು ಹೈಕಮಾಂಡ್ ಮುಖ್ಯಮಂತ್ರಿಯವರಿಗೆ ರವಾನಿಸುತ್ತಿರುವುದು ಅಚ್ಚರಿ ಮೂಡಿಸಿದೆ. ಸಚಿವ ಸಂಪುಟ ವಿಸ್ತರಣೆಯಾಗಿ 12 ದಿನಗಳ ಬಳಿಕ ಖಾತೆ ಹಂಚಿಕೆಯಾಗುತ್ತಿದೆ. ನಾಳೆಯಿಂದ ವಿಧಾನ ಮಂಡಳದ ಅಧಿವೇಶನ ನಡೆಯುತ್ತಿದ್ದು, ಮುನ್ನಾ ದಿನ ಖಾತೆ ಹಂಚಿಕೆಯಾಗಿದೆ.

# ಕಾವೇರಿ ನೀರು ಹಂಚಿಕೆ ವಿವಾದ : ಸುಪ್ರೀಂಗೆ ಮೊರೆ ಹೋಗುವುದು ಅನಿವಾರ್ಯ

**ಬೆಂಗಳೂರು:** ಕಾವೇರಿ ನೀರು ನಿರ್ವಹಣಾ ಸಮಿತಿಯ ಆದೇಶದಂತೆ ತಮಿಳುನಾಡಿಗೆ ಪ್ರತಿದಿನ 12 ಸಾವಿರ ಕ್ಯೂಸೆಕ್ ನೀರನ್ನು 15 ದಿನಗಳ ಕಾಲ ಹರಿಸಿದರೆ ರಾಜ್ಯದ ಜಲಾಶಯಗಳಿಂದ ಸುಮಾರು 16 ಟಿಎಂಸಿ ನೀರು ಖಾಲಿಯಾಗಲಿದೆ ಎಂದು ಜಲಸಂಪನೂಲ ಸಚಿವ ರಾಮಲಿಂಗಾರೆಡ್ಡಿ ಆತಂಕ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ 3,500 ಕ್ಯೂಸೆಕ್ ನೀರು ಹ-ರಿಸುವಂತೆ ಆದೇಶಿಸಲಾಗಿತ್ತು. ಅದರಿಂದ ಹೆಚ್ಚಿನ ಪರಿಣಾಮ ಉಂಟಾಗಿರಲಿಲ್ಲ. ಆದರೆ ಇದೀಗ ಪ್ರತಿದಿನ 12 ಸಾವಿರ ಕ್ಯೂಸೆಕ್ ನೀರು ಹ-ರಿಸುವಂತೆ ನೀಡಿರುವ ಆದೇಶ ದುಬಾರಿಯಾಗಿದೆ ಎಂದರು.

ರಾಜ್ಯದಲ್ಲಿನ ನೀರಿನ ಲಭ್ಯತೆಯನ್ನು ಪರಿಗಣಿಸಿ ಅಲ್ಪ ಪ್ರಮಾಣದಲ್ಲಿ ನೀರು ಹ-ರಿಸುವಂತೆ ಸೂಚಿಸಿದ್ದರೆ ಸಮಸ್ಯೆಯಾಗುತ್ತಿರಲಿಲ್ಲ. ತಮಿಳುನಾಡಿನ ಜಲಾಶಯಗಳಲ್ಲಿ ಸಾಕಷ್ಟು ನೀರಿದ್ದು, ಅಂತರ್ಜಲ ಮಟ್ಟವೂ ಉತ್ತಮವಾಗಿದೆ. ಅಲ್ಲದೆ ಮುಂಗಾರು ಉತ್ತಮವಾಗಿದ್ದು, ಹಿಂಗಾರು ಮಳೆಯೂ ಉತ್ತಮವಾಗುವ ನಿರೀಕ್ಷೆಯಿದೆ. ಆದರೆ ಕರ್ನಾಟಕದಲ್ಲಿ ಮುಂಗಾರು ಕೈಕೊಟ್ಟಿದೆ, ಹಿಂಗಾರು ನಿರೀಕ್ಷೆ ಆಶಾದಾಯಕವಾಗಿಲ್ಲ. ಅಂತರ್ಜಲ ಮಟ್ಟ ಕುಸಿದಿದೆ. ಸುಮಾರು 1,500 ಅಡಿ ಆಳಕ್ಕೆ ಕೊರೆದರೂ ನೀರು ಸಿಗದ ಪರಿಸ್ಥಿತಿ ಇದೆ. ಈ ಎಲ್ಲ ಅಂಶಗಳನ್ನು ಜಲಸಂಪನೂಲ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಸೇ-ರಿದಂತೆ ರಾಜ್ಯದ ಹಿರಿಯ ಅಧಿಕಾರಿಗಳು, ಕಾನೂನು ತಜ್ಞರು ಹಾಗೂ ನೀರಾವರಿ ತಜ್ಞರು ಸಿಡಬ್ಲ್ಯೂಆರ್‌ಸಿ ಮುಂದೆ ಸಮರ್ಥ ವಾದ ಮಂಡಿಸಿ, ಮನವರಿಕೆ ಮಾಡಿಕೊಟ್ಟಿದ್ದರೂ, ರಾಜ್ಯದ ವಾದವನ್ನು ಪರಿಗಣಿಸದೆ ಪ್ರತಿದಿನ 12 ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಆದೇಶಿಸಿರುವುದು ಸರಿಯಲ್ಲ ಎಂದು ರಾಮಲಿಂಗಾರೆಡ್ಡಿ ಹೇಳಿದರು.



ಕಾವೇರಿ ನೀರು ನಿರ್ವಹಣಾ ಸಮಿತಿಯ ಆದೇಶದ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕಾನೂನು ತಜ್ಞರೊಂದಿಗೆ ನಿನ್ನೆಯಿಂದಲೂ ನಿರಂತರ ಚರ್ಚೆ ನಡೆಸುತ್ತಿದ್ದಾರೆ. ರಾಜ್ಯದ ಹಿತಾಸಕ್ತಿ ಕಾಪಾಡಲು ಸುಪ್ರೀಂಕೋರ್ಟ್ ಮೊರೆ ಹೋಗುವುದು ಅನಿವಾರ್ಯವಾಗಿದ್ದು, ಸರ್ಕಾರ ಅಗತ್ಯವಿರುವ ಎಲ್ಲ ಕಾನೂನು ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಸಚಿವರು ಸ್ಪಷ್ಟಪಡಿಸಿದರು. ಈಗಾಗಲೇ ರಾಜ್ಯದ ಅಡ್ವೋಕೇಟ್ ಜನರಲ್ ಅವರ ಜೊತೆ ಚರ್ಚೆ ನಡೆಸಲಾಗಿದೆ. ತಮಿಳುನಾಡು ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದ ರಾಜ್ಯದ ವಕೀಲರು ದಾಖಲೆಗಳನ್ನು ಸಲ್ಲಿಸಲಿದ್ದಾರೆ. ಸುಪ್ರೀಂಕೋರ್ಟ್‌ನ ತೀರ್ಪನ್ನು ಆಧರಿಸಿ ಮುಂದಿನ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ ಎಂದರು.

# ಸರ್ಕಾರ ಸಮರ್ಥನೆಗೆ ಸಚಿವರು, ಶಾಸಕರ ಜೊತೆ ಸಿಎಂ ಚರ್ಚೆ

**ಬೆಂಗಳೂರು:** ಖಾತೆ ಹಂಚಿಕೆಗೆ ಕೊನೆಗೂ ಹೈಕಮಾಂಡ್ ಗ್ರೀನ್ ಸಿಗ್ನಲ್ ನೀಡಿದ್ದು, ಅಧಿಕೃತ ಪಟ್ಟಿಯನ್ನು ಇಂದು ಮುಖ್ಯಮಂತ್ರಿಯವರು ಲೋಕಭವನಕ್ಕೆ ರವಾನಿಸಲಿದ್ದಾರೆ. ಕಳೆದ 10 ದಿನಗಳಿಂದಲೂ ಮರೀಚಿಕೆಯಾಗಿದ್ದ ಖಾತೆಗಳ ಹಂಚಿಕೆ ವಿಚಾರ ಕೊನೆಗೂ ಇತ್ಯಥ-ರ್ಗೊಂಡಂತಾಗಿದೆ. ನಾಳೆಯಿಂದ ಅಧಿವೇಶನ ಆರಂಭಗೊಳ್ಳಲಿದ್ದು, ಮುನ್ನಾದಿನ ಖಾತೆಗಳನ್ನು ಹಂಚುತ್ತಿರುವುದು ರಾಜ್ಯ ರಾಜಕೀಯದಲ್ಲಿ ಇದೇ ಮೊದಲು ಎಂಬ ಟೀಕೆಗಳು ಕೇಳಿ ಬರುತ್ತಿವೆ.

ಮಧ್ಯಾಹ್ನದ ವೇಳೆಗೆ ಪಟ್ಟಿಯನ್ನು ಲೋಕಭವನಕ್ಕೆ ರವಾನಿಸಲಾಗುತ್ತಿದ್ದು, ಅಧಿಕೃತ ಅಧಿಸೂಚನೆ ಪ್ರಕಟವಾದ ಬಳಿಕ ಸಂಜೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂಪುಟದ ಸಚಿವರು ಹಾಗೂ ಶಾಸಕರ ಜೊತೆ ಚರ್ಚೆಗೆ ಸಮಯ ನಿಗದಿಪಡಿಸಿದ್ದಾರೆ.ವಿಧಾನ ಮಂಡಲದ ಅಧಿವೇಶನದಲ್ಲಿ ವಿರೋಧ ಪಕ್ಷಗಳನ್ನು ಎದು-ರಿಸಲು ರಣತಂತ್ರ ರೂಪಿಸಲು ಇಂದು ಶಾಸಕರು ಮತ್ತು ಸಚಿವರ ಜೊತೆ ಚರ್ಚೆ ನಡೆಸಲಿದ್ದಾರೆ. ವಿರೋಧ ಪಕ್ಷಗಳು ಬಿಡದಿ ಉಪ ನಗರ ನಿರ್ಮಾಣ, ನೈಸ್ ರಸ್ತೆ ವಿವಾದ, ಭ್ರಷ್ಟಾಚಾರಕ್ಕೆ ಗುರಿಯಾಗಿರುವ ಬಿ.ನಾಗೇಂದ್ರ ಅವರಿಗೆ ಸಚಿವ ಸ್ಥಾನ ನೀಡಿರುವುದು, ತಮಿಳುನಾಡಿಗೆ ಕಾವೇರಿ ನೀರು ಬಿಡುತ್ತಿರುವುದು, ಬೆಳೆ ನಷ್ಟ, ರೈತರ ಆತಹತ್ಯೆ, ಸಂಪುಟದಲ್ಲಿ ಮಹಿಳಾ ಪ್ರಾತಿನಿಧ್ಯ ಕೊರತೆ, ಪಿಂಚಣಿ ಫಲಾನುಭವಿಗಳ ಕಡಿತ, ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಸೇರಿದಂತೆ ಹಲವಾರು ಸಮಸ್ಯೆಗಳನ್ನು ಆಯುಧವಾಗಿಟ್ಟುಕೊಂಡು ಸರ್ಕಾರದ ವಿರುದ್ಧ ಝಳಪಿಸಲು ಸಜ್ಜಾಗಿವೆ. ಇದಕ್ಕೆ ಪ್ರತಿಯಾಗಿ ಮುಖ್ಯಮಂತ್ರಿಯವರು ಅಧಿವೇಶನದಲ್ಲಿ ಸರ್ಕಾರವನ್ನು ಸಮರ್ಥಿಸಿಕೊಳ್ಳಲು ಸಚಿವರ ಜೊತೆ, ಕೆಲ ಶಾಸಕರ ನ್ನೊಳಗೊಂಡು ತಂಡಗಳನ್ನು ರಚಿಸಲಿದ್ದಾರೆ. ಸಂಪುಟ ವಿಸ್ತರಣೆ ಅಸಮಾಧಾನ, ಖಾತೆ ಹಂಚಿಕೆಯಲ್ಲಿನ ವಿಳಂಬ, ಕಾಂಗ್ರೆಸ್ ಹೈಕಮಾಂಡ್‌ನ ಅತಿಯಾದ ಹಸ್ತಕ್ಷೇಪದಿಂದ ಕಾಂಗ್ರೆಸ್‌ನಲ್ಲೇ ಅಸಮಾಧಾನ, ಅತೃಪ್ತಿಗಳು ತೀವ್ರವಾಗಿವೆ.

ಸಚಿವ ಸ್ಥಾನ ಸಿಗದೇ ಇರುವ ಕೆಲ ಶಾಸಕರು ಭಿನ್ನಮತೀಯರಾಗಿ ಸರ್ಕಾರದ ವಿರುದ್ಧ ಮುಗಿ ಬೀಳಲು ಒಳಗೊಳಗೆ ತಯಾರಾಗಿದ್ದಾರೆ. ಈ ಪರಿಸ್ಥಿತಿಗಳನ್ನು ಅರ್ಥೈಸಿಕೊಂಡಿರುವ ಮುಖ್ಯಮಂತ್ರಿಯವರು ಅಸಮಾಧಾನಿತರನ್ನು ಸಂತೈಸುವ ಜೊತೆಗೆ ಪಕ್ಷ ನಿಷ್ಠರಾಗಿ ಸರ್ಕಾರದ ಬೆಂಬಲಕ್ಕೆ ನಿಲ್ಲುವಂತಹ 30 ರಿಂದ 40 ಶಾಸಕರನ್ನು ಗುರುತಿಸಿದ್ದು, ಅವರುಗಳ ಜೊತೆ ವಿಷಯಾಧರಿತ ಚರ್ಚೆ ನಡೆಸಲಿದ್ದಾರೆ.

ಪಕ್ಷ ರಾಜಕಾರಣ ವಿಚಾರ ಬಂದಾಗ ಸಾಮೂಹಿಕವಾಗಿ ಎಲ್ಲರೂ ವಿರೋಧ ಪಕ್ಷಗಳಿಗೆ ಎದುರು ನಿಲ್ಲಬೇಕು. ವಿಷಯಾಧರಿತ ಚರ್ಚೆಗಳು ಎದುರಾದಾಗ ಸಚಿವರ ಜೊತೆಗೆ ಶಾಸಕರು ಸರ್ಕಾರವನ್ನು ಸಮರ್ಥಿಸಿಕೊಳ್ಳಬೇಕೆಂದು



ಮುಖ್ಯಮಂತ್ರಿ ಸಲಹೆ ನೀಡಲಿದ್ದಾರೆ. ಇಂದಷ್ಟೇ ಖಾತೆ ಹಂಚಿಕೆಯಾಗುತ್ತಿರುವುದರಿಂದ 19 ಮಂದಿ ಹೊಸ ಸಚಿವರಿಗೆ ಇಲಾಖೆಯ ಕಾರ್ಯನಿರ್ವಹಣೆ ಮತ್ತು ಅಧಿವೇಶನದಲ್ಲಿ ಪ್ರಶ್ನೋತ್ತರ ಸೇರಿದಂತೆ ಕೆಲವು ಸಂದರ್ಭಗಳನ್ನು ನಿಭಾಯಿಸುವುದು ಕಷ್ಟಸಾಧ್ಯವಾಗುವ ಪರಿಸ್ಥಿತಿ ಇದೆ. ಅದಕ್ಕಾಗಿ ಕೆಲವು ಮಾಜಿ ಸಚಿವರು ಹಾಗೂ ಹಿರಿಯ ಶಾಸಕರನ್ನು ನೂತನ ಸಚಿವರ ಬೆಂಬಲಕ್ಕೆ ನಿಲ್ಲುವಂತೆ ಮುಖ್ಯಮಂತ್ರಿ ಮನವಿ ಮಾಡಿಕೊಳ್ಳಲಿದ್ದಾರೆ ಎನ್ನಲಾಗಿದೆ.

ಸಂಪುಟ ವಿಸ್ತರಣೆ ಸೇರಿದಂತೆ ಯಾವುದೇ ಅಸಮಾಧಾನಗಳನ್ನು ಚರ್ಚಿಸಲು ಕಾಂಗ್ರೆಸ್ ಶಾಸಕಾಂಗ ಸಭೆಯಲ್ಲಿ ಅವಕಾಶ ಕಲ್ಪಿಸಲಾಗುವುದು. ವಿಧಾನ ಮಂಡಲದ ವೇದಿಕೆಯಲ್ಲಿ ಸರ್ಕಾರದ ಸಮರ್ಥನೆ ಮಾಡಿಕೊಳ್ಳುವುದು ಮುಂದಿನ ಚುನಾವಣೆಯ ದೃಷ್ಟಿಯಿಂದ ಎಲ್ಲರಿಗೂ ಬಹುಮುಖ್ಯವಾಗಿದೆ. ಶಾಸಕರು ಸರ್ಕಾರದ ಪರವಾಗಿ ನಿಲ್ಲಲೇಬೇಕು. ಪಕ್ಷ ಮುಂದಿನ ದಿನಗಳಲ್ಲಿ ಒಂದಲ್ಲಾ ಒಂದು ರೀತಿ ಅವಕಾಶಗಳನ್ನು ಕಲ್ಪಿಸಲಿದೆ. ಪಕ್ಷ ವಿರೋಧಿಗಳಾಗಿ, ಭಿನ್ನಮತೀಯರಂತೆ ವರ್ತಿಸುವವರ ವಿರುದ್ಧ ಕಠಿಣ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಎಚ್ಚರಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಬೆಂಗಳೂರು : 350 ಕ್ಕೂ ಹೆಚ್ಚು ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳು ಅಗ್ನಿಗಾಹುತಿ

**ಬೆಂಗಳೂರು:** ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳನ್ನು ನಿಲುಗಡೆ ಮಾಡಿದ್ದ ಸ್ಥಳದಲ್ಲಿ ಬೆಂಕಿ ಅವಘಡ ಸಂಭವಿಸಿ ಸುಮಾರು 350 ಕ್ಕೂ ಹೆಚ್ಚು ಇವಿ ವಾಹನಗಳು ಬೆಂಕಿಗಾಹುತಿಯಾಗಿರುವ ಘಟನೆ ರಾಮಮೂರ್ತಿನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.ಇಲ್ಲಿನ ಎನ್‌ಆರ್‌ಐ ಲೇಔಟ್‌ನ ಖಾಲಿ ಜಾಗದಲ್ಲಿ 500 ಹೆಚ್ಚು ಇವಿ ದ್ವಿಚಕ್ರ ವಾಹನಗಳನ್ನು ನಿಲುಗಡೆ ಮಾಡಲಾಗುತ್ತದೆ.

ಈ ವಾಹನಗಳನ್ನು ಝೆಪ್ಟೋ, ಸ್ವಿಗ್ಗಿ ಹಾಗೂ ಝೊಮ್ಯಾಟೋ ಸಂಸ್ಥೆಗಳ ಡೆಲಿವರಿ ಸಿಬ್ಬಂದಿಗೆ ದಿನದ ಬಾಡಿಗೆ ಆಧಾರದ ಮೇಲೆ ನೀಡಲಾಗುತ್ತದೆ. ಡೆಲಿವರಿ ಬಾಯ್?ಸ ಬೆಳಗ್ಗೆ ತೆಗೆದುಕೊಂಡು ಹೋಗಿ ರಾತ್ರಿ ಈ ಸ್ಥಳಕ್ಕೆ ತಂದು ಬಿಡುತ್ತಾರೆ. ಸರ್ವಿಸ್ ವಾಹನಗಳು ಸಹ ಈ ಸ್ಥಳದಲ್ಲಿ ನಿಲುಗಡೆ ಮಾಡಲಾಗಿತ್ತು. ನಿನ್ನೆ ಸಂಜೆ 7 ಗಂಟೆ ಸುಮಾರಿನಲ್ಲಿ ವಾಹನಗಳಿದ್ದ ಆವರಣದ ಗೇಟ್‌ಗೆ ಎಂದಿನಂತೆ ಬೀಗ ಹಾಕಲಾಗಿತ್ತು. ಈ ಆವರಣದಲ್ಲಿ ರಾತ್ರಿ 8.30 ರ ಸುಮಾರಿನಲ್ಲಿ ಬೆಂಕಿ ಕಾಣಿಸಿಕೊಂಡು



ವಾಹನಗಳು ಬೆಂಕಿಯಿಂದಾಗಿ ಹೊತ್ತಿ ಉರಿ ದಿದೆ. ನೋಡ ನೋಡುತ್ತಿದ್ದಂತೆ ಬೆಂಕಿ ಅಕ್ಕಪಕ್ಕದ ಇವಿ ಬೈಕ್‌ಗಳಿಗೂ ತಾಗಿದ್ದರಿಂದ ಬೆಂಕಿಯ ತೀವ್ರತೆ ಹೆಚ್ಚಾಗಿ ಮುಗಿಲೆತ್ತರಕ್ಕೆ ಹೊಗೆ ಆವರಿಸಿದೆ. ದಾರಿ ಹೋಕರು ಗಮನಿಸಿ ತಕ್ಷಣ ಪೊಲೀಸರಿಗೆ ಹಾಗೂ ಅಗ್ನಿಶಾಮಕ ದಳಕ್ಕೆ ತಿಳಿಸಿದ್ದಾರೆ. ಸುದ್ದಿ ತಿಳಿದು ಅಗ್ನಿಶಾಮಕ ಸಿಬ್ಬಂದಿ ಎರಡು ವಾಹನಗಳೊಂದಿಗೆ ಆಗಮಿಸಿ ಬೆಂಕಿಯನ್ನು ನಂದಿಸುವಲ್ಲಿ ಯಶಸ್ವಿಯಾದರಾದರೂ ಸುಮಾರು 350 ಕ್ಕೂ ಹೆಚ್ಚು ದ್ವಿಚಕ್ರ ವಾಹನಗಳು ಬೆಂಕಿಗಾಹುತಿಯಾಗಿವೆ. ಬೆಂಕಿ ಹೊತ್ತಿಕೊಳ್ಳಲು ಸದ್ಯಕ್ಕೆ ಕಾರಣ ತಿಳಿದು ಬಂದಿಲ್ಲ. ಇವಿ ದ್ವಿಚಕ್ರ ವಾಹನದ ಬ್ಯಾಟರಿ ಕಿಡಿಯಿಂದ ಬೆಂಕಿ ಕಾಣಿಸಿಕೊಂಡು ಅಕ್ಕಪಕ್ಕದ ವಾಹನಗಳಿಗೂ ತಾಗಿ ಈ ಅವಘಡ ಸಂಭವಿಸಿರಬಹುದೆಂಬ ಶಂಕೆ ವ್ಯಕ್ತವಾಗಿದೆ. ಮತ್ತೊಂದೆಡೆ ಯಾರಾದರೂ ಕಿಡಿಗೇಡಿಗಳು ಈ ಕೃತ್ಯವೆಸಗಿದ್ದಾರೆ ಎಂಬ ಬಗ್ಗೆಯೂ ಪೊಲೀಸರು ಅನುಮಾನ ವ್ಯಕ್ತಪಡಿಸಿದ್ದಾರೆ.

ಘಟನೆ ಬಗ್ಗೆ ಪ್ರತಿಕ್ರಿಯಿಸಿದ ಇವಿಸ್ ಕಂಪನಿಯ ಅಡ್ಮಿನ್ ಹರೀಶ್, ಜಾಗದ ಮಾಲೀಕರು ತಮಗೆ ರಾತ್ರಿ 8.30 ರ ಸುಮಾರಿನಲ್ಲಿ ಕರೆ ಮಾಡಿ ವಿಷಯ ತಿಳಿಸಿದರು. ನಾನು ತಕ್ಷಣ ಸ್ಥಳಕ್ಕೆ ಬಂದು ನೋಡಿದೆ ಅಷ್ಟರಲ್ಲಾಗಲೇ ಬೈಕ್‌ಗಳೆಲ್ಲಾ ಸುಟ್ಟು ಕರಕಲಾಗಿದ್ದವು. ಇದುವರೆಗೂ ಈ ರೀತಿಯ ಘಟನೆ ನಡೆದಿರಲಿಲ್ಲ. ದಿನನಿತ್ಯದ ಕೆಲಸ ಮುಗಿದ ನಂತರ ಡೆಲಿವರಿ ಯುವಕರು ವಾಹನಗಳನ್ನು ಪಾರ್ಕ್ ಮಾಡಲು ಹಾಗೂ ಸರ್ವಿಸ್‌ಗೆ ಬರುವ ಗಾಡಿಗಳನ್ನು ಈ ಜಾಗದಲ್ಲಿ ನಿಲ್ಲಿಸಲಾಗಿತ್ತು. ಯಾರೋ ಕಿಡಿಗೇಡಿಗಳೇ ಈ ಕೃತ್ಯವೆಸಗಿರಬಹುದೆಂಬ ಅನುಮಾನವಿದೆ ಎಂದು ಅವರು ಪ್ರತಿಕ್ರಿಯಿಸಿದ್ದಾರೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಘಟನೆ ಬಗ್ಗೆ ಪ್ರಕರಣ ದಾಖಲಿಸಿ ಕೊಂಡಿರುವ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

"JANASHREE TIMES" Kannada daily morning Owner, Published by ANANDAYYA DANAYYA VIRAKTAMATH Address: 229/1, 3 RD CROSS VIVEKANAND NAGAR NEAR WATER TANK, GADAG, KARNATAKA - 582101. Printed at: SHIVANI PRINTERS Printers. Address: AT: HULKOTI T/D: GADAG OFFICE ADDERS: SHIVANI PRINTERS NEW COURT OPPSITE PLOT NO 28 RS NO 312/3B GARAG COMPLEX, GADAG, KARNATAKA - 582101. email: janashreetimes@gmail.com